# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 | Issue : 58 | SATURDAY 09-05-2026 | PRGI No : KNKAN/26/A0962 | Pages:4 | Rs.2.00 | M: 9742418836


# ಮನ್ರೇಗಾ ಪುನರ್ ಸ್ಥಾಪನೆಗೆ ಸುಪ್ರೀಂ ಕೋರ್ಟ್ ಮೊರೆ ಹೋಗಲು ರಾಜ್ಯ ಸರ್ಕಾರ ನಿರ್ಧಾರ..!



ಬೆಂಗಳೂರು: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಎಂಎನ್‌ಆರ್‌ಇಜಿಎ) ರದ್ದುಪಡಿಸಿ ಜಾರಿಗೆ ತಂದಿರುವ 'ವಿಕಸಿತ ಭಾರತ್–ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕಾ ಮಿಷನ್ (ಗ್ರಾಮೀಣ)' ಕಾಯ್ದೆ ವಿರುದ್ಧ ಸುಪ್ರೀಂ ಕೋರ್ಟ್ ಮೊರೆ ಹೋಗಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದೆ.

ಕೇಂದ್ರ ಸರ್ಕಾರ ಮನ್ರೇಗಾಗೆ ಬದಲಾಗಿ VB-G RAM-G ಕಾಯ್ದೆ ಜಾರಿಗೊಳಿಸಿರುವುದಕ್ಕೆ ರಾಜ್ಯ ಸರ್ಕಾರ ಈಗಾಗಲೇ ವಿರೋಧ ವ್ಯಕ್ತಪಡಿಸಿ, ಎಂಎನ್‌ಆರ್‌ಇಜಿಎ ಪುನರ್ ಸ್ಥಾಪನೆಗೆ ಆಗ್ರಹಿಸಿತ್ತು.

ಸಚಿವ ಸಂಪುಟ ಸಭೆಯ ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು, "ಕೇಂದ್ರ ಸರ್ಕಾರ ಇನ್ನೂ ಹೊಸ ಯೋಜನೆ ಜಾರಿಗೆ ಸಂಬಂಧಿಸಿದ ಅಧಿಸೂಚನೆ ಅಥವಾ ಸ್ಪಷ್ಟ ಮಾರ್ಗಸೂಚಿಗಳನ್ನು ನೀಡಿಲ್ಲ. ಹೀಗಾಗಿ ಜನರ ಹಿತದೃಷ್ಟಿಯಿಂದ ಸುಪ್ರೀಂ ಕೋರ್ಟ್ ಮೊರೆ ಹೋಗುವುದು ಅನಿವಾರ್ಯವಾಗಿದೆ ಎಂದು ಹೇಳಿದರು.

ಪ್ರಸ್ತುತ ಹಣಕಾಸು ವರ್ಷಕ್ಕೆ ಕಾರ್ಯಯೋಜನೆ ರೂಪಿಸಿ ಮನ್ರೇಗಾ ಜಾರಿಗೆ ಅವಕಾಶ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಲಾಗುವುದು. ಮನ್ರೇಗಾ ಪುನರ್ ಸ್ಥಾಪನೆಗೂ ನಾವು ಆಗ್ರಹಿಸಲಾಗುವುದು ಎಂದು ತಿಳಿಸಿದರು.

ಕೇಂದ್ರ ಸರ್ಕಾರ ರಾಜ್ಯದ ಸಂವಿಧಾನಬದ್ಧ ಹಕ್ಕನ್ನು ಕಸಿದುಕೊಂಡಿದ್ದು, ಇದರ ಪರಿಣಾಮ ಕೃಷಿ ಕಾರ್ಮಿಕರ ಮೇಲೆ ದುಷ್ಪರಿಣಾಮ ಬೀರಿದೆ ಎಂದೂ ಇದೇ ವೇಳೆ ಆರೋಪಿಸಿದರು.

### ಸಚಿವ ಸಂಪುಟದ ಇತರೆ ಪ್ರಮುಖ ತೀರ್ಮಾನಗಳು:

- ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ 22 ಕೋಟಿ ರೂ. ವೆಚ್ಚದ ಡಿಜಿಟಲ್ ಪ್ಲಾನೆಟೇರಿಯಂ
- ಕೋಲಾರ ಜಿಲ್ಲೆಯ ಬಂಗಾರಪೇಟೆ ಕ್ಷೇತ್ರದಲ್ಲಿ 66 ಕೋಟಿ ರೂ. ವೆಚ್ಚದ ನಾಲ್ಕು ಮಾರ್ಗ ರಸ್ತೆ ಅಭಿವೃದ್ಧಿ
- ಟ್ಯಾಕ್ಸಿ ಹಾಗೂ ಆಟೋ ಚಾಲಕರ ಕಲ್ಯಾಣಕ್ಕಾಗಿ ಪ್ರತ್ಯೇಕ ಮಂಡಳಿ ರಚನೆಗೆ ಅನುಮತಿ
- ಬೆಂಗಳೂರು ಬನ್ನೇರುಘಟ್ಟ ಜೈವಿಕ ಉದ್ಯಾನ ಮತ್ತು ಮೈಸೂರು ಮೃಗಾಲಯದಲ್ಲಿ ಡಿಜಿಟಲ್ ಜೂ ಗೈಡ್ ಯೋಜನೆ
- ಬನ್ನೇರುಘಟ್ಟದಲ್ಲಿ 144.40 ಕೋಟಿ ರೂ. ವೆಚ್ಚದ ಅಕ್ವೇರಿಯಂ ಯೋಜನೆ
- ಮೈಸೂರು ಜಯದೇವ ಹೃದ್ರೋಗ ಆಸ್ಪತ್ರೆಯನ್ನು 600 ಹಾಸಿಗೆ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸಲು ಅನುಮೋದನೆ
- ದೊಡ್ಡಬಳ್ಳಾಪುರದ ಘಾಟಿ ಸುಬ್ರಹ್ಮಣ್ಯ ದೇವಾಲಯ ಅಭಿವೃದ್ಧಿಗೆ 23.76 ಕೋಟಿ ರೂ.
- ಕುಕ್ಕೆ ಸುಬ್ರಹ್ಮಣ್ಯ ದೇವಾಲಯ ಮಾಸ್ಟರ್ ಪ್ಲಾನ್ ಮೂರನೇ ಹಂತಕ್ಕೆ 604.65 ಕೋಟಿ ರೂ.
- ಕಲಬುರಗಿ ಮತ್ತು ಯಾದಗಿರಿಯಲ್ಲಿ ಮೂರು ಹೊಸ ಕೈಗಾರಿಕಾ ಪ್ರದೇಶ ಸ್ಥಾಪನೆ
- ಕ್ರೀಡಾ ಸಾಧಕರಿಗೆ ಸರ್ಕಾರಿ ನೇಮಕಾತಿಯಲ್ಲಿ ಶೇ.2ರಷ್ಟು ಮೀಸಲಾತಿ
- ರಾಯಚೂರು ಜಿಲ್ಲೆಯ ಹಟ್ಟಿ ಗೋಲ್ಡ್ ಮೈನ್ಸ್ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಗೆ 132.50 ಕೋಟಿ ರೂ. ಮಂಜೂರು.

# ಐಪಿಎಲ್ ಸ್ಥಳಾಂತರ: ಸರ್ಕಾರಕ್ಕೆ ಸಂಬಂಧವಿಲ್ಲ



ಬೆಂಗಳೂರು: ಬೆಂಗಳೂರಿನಿಂದ ಐಪಿಎಲ್ ಕ್ರಿಕೆಟ್ ಫೈನಲ್ ಪಂದ್ಯ ಸ್ಥಳಾಂತರಕ್ಕೂ ರಾಜ್ಯ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ. ಅಹಮದಾಬಾದ್‌ನಲ್ಲಿ ಹೆಚ್ಚು ಆಸನಗಳ ವ್ಯವಸ್ಥೆ ಇದೆ ಎಂದು ಸ್ಥಳಾಂತರ ಮಾಡಿರಬಹುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರಿಡಾಂಗಣದಿಂದ ಐಪಿಎಲ್ ಫೈನಲ್ ಪಂದ್ಯ ವರ್ಗಾವಣೆ ಮಾಡಿರುವ ವಿಚಾರಣೆ ಬಿಸಿಸಿಐ ಆರ್‌ಸಿಬಿಗೆ ಬಿಟ್ಟದ್ದು ನಮಗೂ ಅದಕ್ಕೂ ಸಂಬಂಧ ಇಲ್ಲ. ಅವರ ಒಪ್ಪಂದ ನಮಗೇನೂ ಗೊತ್ತಿಲ್ಲ ಎಂದರು.

ಈ ಪಂದ್ಯಾವಳಿಗಳನ್ನು ವಾಣಿಜ್ಯ ದೃಷ್ಟಿಕೋನದಲ್ಲಿ ನೋಡಿದ್ದಾರೆ. ಆ ಕಾರಣಕ್ಕೆ ಸ್ಥಳಾಂತರ ಆಗಿರಬಹುದು. ಭದ್ರತೆ ಸೇರಿದಂತೆ ಬೇರೆ ಯಾವ ವಿಚಾರದಲ್ಲೂ ಕೊರತೆಯಾಗದಂತೆ ನಾವು ಕ್ರಮ ಕೈಗೊಂಡಿದ್ದೇವೆ. ಕಡಿಮೆ ಸಮಯದಲ್ಲಿ ಭದ್ರತೆ ವ್ಯವಸ್ಥೆ ಮಾಡಿ ನ್ಯಾ. ಖುನ್ನಾ ವರದಿಯಂತೆ ಕ್ರಮಗಳನ್ನು ಕೈಗೊಂಡಿದ್ದೇವೆ ಎಂದು ಸ್ಪಷ್ಟಪಡಿಸಿದರು

ರಾಜ್ಯದ ಶಾಸಕರು ಟಿಕೆಟ್ ಬೇಡಿಕೆ ಹೆಚ್ಚಿದ್ದರಿಂದ ಫೈನಲ್ ಪಂದ್ಯಾ ಸ್ಥಳಾಂತರವಾಗಿದೆ ಎಂಬ ವರದಿಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹಾಗೇನಾದರೂ ಇದ್ದರೆ ಅದನ್ನು ಕ್ರಿಕೆಟ್ ಸಂಸ್ಥೆಯವರು ಹೇಳಬೇಕು. ಯಾರ್ಯಾರು ಎಷ್ಟು ಟಿಕೆಟ್ ತೆಗೆದಿದ್ದಾರೆ ಬಹಿರಂಗಪಡಿಸಲಿ ಎಂದರು

ಆರ್‌ಸಿಬಿ ಅಭಿಮಾನಿಗಳಿಗೆ ಸರ್ಕಾರದಿಂದ ಮೋಸ ಆಗಿದೆ ಎಂಬ ವಿಪಕ್ಷಗಳ ಆರೋಪ ಸರಿಯಲ್ಲ. ಬಿಜೆಪಿ–ಜೆಡಿಎಸ್ ಕ್ರೀಡೆಗೆ ಏನು ಸಹಕಾರ ಕೊಟ್ಟಿದೆ ಎಂಬುದು ಗೊತ್ತಿದೆ. ಸುಮ್ಮನೆ ಆರೋಪ ಮಾಡುವುದು ತರವಲ್ಲ ಎಂದು ಗರಂ ಆಗಿ ಹೇಳಿದರು

# ಅಕ್ಕಮಹಾದೇವಿಯ ಜಯಂತಿ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಸ್ತ್ರೀ ಶಕ್ತಿಯ ಪ್ರತಿಪಾದಕಿ, ಮಹಾನ್ ಸಾಧಕಿ, ಕನ್ನಡದ ಪ್ರಪ್ರಥಮ ಕವಯಿತ್ರಿ ಶಿವಶರಣೆ ಅಕ್ಕಮಹಾದೇವಿಯ ಜಯಂತಿ ಉತ್ಸವ ಕಾರ್ಯಕ್ರಮ ನಿಮಿತ್ ತೋಳಣಕೆರೆ ವೃತ್ತದಲ್ಲಿ ನಡೆದ ಶಿವಶರಣೆ ಅಕ್ಕಮಹಾದೇವಿಯ ಜಯಂತಿಯ ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರ ಜ್ಯೋತಿ ಪಾಟೀಲ ಹಾಗೂ ಪಾಲಿಕೆಯ ಸದಸ್ಯೆ, ಮಾಜಿ ಮಹಾಪೌರರಾದ ವೀಣಾ ಭಾರದ್ವಾಡ ಅವರು ಉತ್ಸಾಹದಿಂದ ಭಾಗವಹಿಸಿದ್ದರು. ಸುಜಯ್ ಸುರೇಶ್ ಹೊರಕೇರಿ, ಸೋಹನ್ ಸುರೇಶ್ ಹೊರಕೇರಿ, ಸಹನಾ ಸುರೇಶ್ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಸುಪ್ರಿಯಾ ಸುರೇಶ್ ಹೊರಕೇರಿ, ಡಾ. ಸ್ನೇಹಾ ಭೂಸಾನೂರ, ಶೋಭಾ ಜಾಬಿನ್, ಸುನೀಲಾ ಬ್ಯಾಹಟ್ಟಿ, ವಿದ್ಯಾ .ವಂಟಮುರಿ, ಆಶಾ ಕವಳಿ, ಸಿದ್ದಮ್ಮ ಅಡಿವೆಣ್ಣವರ, ದಾಕ್ಷಾಯಣಿ ಕೋಳಿವಾಡ, ಭಾರತಿ ವಾಲಿ, ಜಯಶ್ರೀ ಹಿರೇಮಠ, ಮುಂತಾದವರು ಇದ್ದರು.

# ಜೈನ ಧರ್ಮದ ತತ್ವಗಳು ವಿಶ್ವಕ್ಕೆ ಮಾದರಿ: ಲಕ್ಷ್ಮಣ ಸವದಿ

## ಪದ್ಮಾವತಿ ಮಂದಿರಕ್ಕೆ ಶಸಕ ಲಕ್ಷ್ಮಣ ಸವದಿ 5 ಲಕ್ಷ ರೂ ದೇಣಿಗೆ ಘೋಷಣೆ



> "ಜೈನ ಧರ್ಮದ ಆಚಾರ–ವಿಚಾರಗಳಲ್ಲಿ ಇಂದು ಕೂಡ ಯಾವುದೇ ಬದಲಾವಣೆ ಆಗಿಲ್ಲ. ಬದುಕುವ ಹಕ್ಕು ಎಲ್ಲಾ ಜೀವಿಗಳಿಗೂ ಸಮಾನವಾಗಿ ಇದೆ. ತಾವೂ ಬದುಕಿ ಇತರ ಜೀವಿಗಳಿಗೂ ಸಮಾನ ಅವಕಾಶ ನೀಡುವ ಜೈನ ಧರ್ಮ ಶ್ರೇಷ್ಠಧರ್ಮವಾಗಿದೆ. ಭಗವಾನ್ ಮಹಾವೀರ ಭೋಧಿಸಿದ ತತ್ವಗಳು ವಿಶ್ವಮಾನ್ಯವಾಗಿದ್ದು, ಸಾರ್ವಕಾಲಿಕ ಮೌಲ್ಯ ಹೊಂದಿದೆ."
>
> **ಲಕ್ಷ್ಮಣ ಸವದಿ**
> **ಅಥಣಿ ಶಾಸಕ**

**ಬೆಳಗಾವಿ ವಾರ್ತೆ ಮೋಳೆ;–** ಜೈನ ಧರ್ಮದ ತತ್ವ ಹಾಗೂ ಸಿದ್ಧಾಂತಗಳು ಒಂದು ಸಮುದಾಯಕ್ಕೆ ಸಿಮೀತವಾಗಿಲ್ಲ. ಇಡೀ ಸಮಾಜಕ್ಕೆ ಅವಶ್ಯವಾಗಿದೆ. ಜೈನ ಧರ್ಮದ ಮುನಿಗಳು "ಜೀವೋ ಔರ ಜೀನೇ ದೋ" ಎಂಬ ಸಂದೇಶ ನೀಡಿದ್ದು ಇಡೀ ಜಗತ್ತಿಗೆ ಮಾದರಿಯಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ, ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಕಾಗವಾಡ ತಾಲೂಕಿನ ಉಗಾರ ಬುದುಕ್ ಗ್ರಾಮದ ಶ್ರೀ ಪದ್ಮಾವತಿ ಮಂದಿರಲ್ಲಿ ನಿರ್ಮಿಸಲಾಗಿದ್ದ ಯಾತ್ರಿ ನಿವಾಸ, ಭೋಜನ ಶಾಲೆ ಹಾಗೂ ಸಭಾ ಭವನದ ಉದ್ಘಾಟನೆಯ ನಿಮಿತ್ಯ ಏರ್ಪಡಿಸಿದ ಐದು ದಿನಗಳ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.ಜೈನ ಧರ್ಮ ಹಲವಾರು ತತ್ವಾದರ್ಶಗಳನ್ನು ಪಾಲಿಸಿಕೊಂಡು ಬರುತ್ತಿದ್ದು, ಈ ಭೂಮಿಯ ಮೇಲೆ ಜನ್ಮ ತಾಳಿದ ಪ್ರತಿಯೊಂದು ಜೀವಿಯೂ ತಾನು ಬದುಕಬೇಕು, ಇತರರಿಗೂ ಬದುಕಲು ಅವಕಾಶ ಮಾಡಿ ಕೊಡಬೇಕು ಎಂಬ ಜೈನ ಧರ್ಮದ ತತ್ವ ಇಡೀ ವಿಶ್ವಕ್ಕೆ ಮಾದರಿಯಾಗಿದ್ದು, ಇದು ಕೇಲವ ಜೈನ ಧರ್ಮಕ್ಕೆ ಮಾತ್ರ ಸೀಮಿತವಾಗದೇ ಎಲ್ಲಾ ಧರ್ಮಿಗಳಿಗೂ ಅನ್ವಯಿಸುತ್ತೆ ಎಂದು ತಿಳಿಸಿದರು.

ನಮ್ಮ ದೇಶದಲ್ಲಿ ಧರ್ಮಕ್ಕೆ ಪುರಾತನ ಇತಿಹಾಸವಿದ್ದು,ನಾವೆಲ್ಲರೂ ಜೈನ ಧರ್ಮವನ್ನು ಗೌರವಿಸಬೇಕು.ಜೈನ ಧರ್ಮದವರು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ್ದು,ಸರಕಾರದಿಂದ ಅನೇಕ ಸೌಲಭ್ಯಗಳು ದೊರೆಯುತ್ತವೆ.ಇದರ ಉಪಯೋಗ ಪಡೆದುಕೊಳ್ಳಬೇಕೆಂದು. ಲಕ್ಷ್ಮಣ ಸವದಿ ಕಿವಿಮಾತು ಹೇಳಿದರು.

ಪದ್ಮಾವತಿ ಮಂದಿರದ ಧರ್ಮದರ್ಶಿಗಳಾದ ಶೀತಲಗೌಡ ಪಾಟೀಲ ಮಾತನಾಡಿ ಉಗಾರ ಪದ್ಮಾವತಿ ಮಂದಿರವು ಸುಮಾರು 400 ವರ್ಷಗಳ ಇತಿಹಾಸವನ್ನು ಹೊಂದಿದೆ.ಇಲ್ಲಿಗೆ ಜೈನ ಸೇರಿದಂತೆ ಹಲವಾರು ಧರ್ಮಿಯರು ನಡೆದುಕೊಳ್ಳುತ್ತಾರೆ. ಈ ದೇವಿಯ ಮುಂದೆ ಭಕ್ತರು ತಮ್ಮ ಇಷ್ಟಾರ್ಥಗಳನ್ನು ಇಡೇರಿಸುವಂತೆ ಬೇಡಿಕೊಂಡರೆ ಖಂಡಿತವಾಗಿಯೂ ಇಡೇರುತ್ತವೆ. ಎಂದ ಅವರು ಶಾಸಕ ಲಕ್ಷ್ಮಣ ಸವದಿಯವರು ಈ ಕ್ಷೇತ್ರವನ್ನು ನೋಡಿ ತಾವಾಗಿಯೇ 5 ಲಕ್ಷ ರೂ ದೇಣೀಗೆ ಘೋಷಿಸಿರುವದುದು ಸಂತಸ ತಂದಿದೆ ಎಂದರು.

ಈ ವೇಳೆ, ಮಂದಿರದ ವತಿಯಿಂದ ಅಥಣಿ ಶಾಸಕ ಲಕ್ಷ್ಮಣ ಸವದಿ,ಮಹಾರಾಷ್ಟ್ರದ ಮಾಜಿ ಸಚಿವರಾಜೇಂದ್ರ ಪಾಟೀಲ (ಯಡ್ರಾಂಕರ) ಪುರಸಭಾ ಸದಸ್ಯ ರಾಜು ಗುಡೋಡಗಿಯವರನ್ನು ಶೀತಲಗೌಡ ಪಾಟೀಲ, ವೃಷಭ ಪಾಟೀಲ, ಅಣ್ಣಾಗೌಡ ಪಾಟೀಲ ಹಾಗೂ ಮತ್ತಿತರರು ಸನ್ಮಾನಿಸಿದರು ಈ ವೇಳೆ ಅಣ್ಣಾಸಾಬ ನಂದಗಾಂವ, ವಜ್ರಕುಮಾರ ಮಗದುಮ್, ಆದೇಶ ವಸವಾಡೆ, ಸೇಖುಇದಂತೆ ಅನೇಕರು ಉಪಸ್ಥಿತರಿದ್ದರು.

# ಮೇ.11 ರಂದು ವಿವಿಧ ಮರಗಳ ತೆರವಿಗೆ ಬಹಿರಂಗ ಹರಾಜು

ಧಾರವಾಡ: ಧಾರವಾಡ ಪುಣೆ ಬೆಂಗಳೂರು ರಸ್ತೆ ಬದಿಯ ಒಣಗಿನಿಂತ ಆತಂಕಕಾರಿ 8 ನೀಲಗಿರಿ, 1 ನೇರಳೆ ಒಟ್ಟು 9 ಮರಗಳು ಹಾಗೂ ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಗ್ರಾಮ ಪಂಚಾಯತ ವ್ಯಾಪ್ತಿ ಮುಮ್ಮಿಗಟ್ಟಿ ಗ್ರಾಮದ ರಿ.ಸ.ನಂ–55 ಕ್ಷೇತ್ರ 13–ಎಕರೆ, 18–ಗುಂಟೆ ಪೈಕಿ 2 ಎಕರೆ, 00 ಗುಂಟೆ ಜಮೀನಿನಲ್ಲಿರುವ 43 ಅಕೇಶಿಯಾ ಮರಗಳು ಒಟ್ಟು 52 ವಿವಿಧ ಜಾತಿಯ ಮರಗಳನ್ನು ವಲಯ ಅರಣ್ಯ ಅಧಿಕಾರಿ ಧಾರವಾಡ ಅವರ ಕಛೇರಿಯಲ್ಲಿ ಮೇ 11, 2026 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (ಗಿಖಖ) ರಲ್ಲಿ ಅಗತ್ಯಪಡಿಸಿರುವಂತೆ ಸದರಿ ವಿಷಯವನ್ನು ಈ ಪ್ರಕಟಣೆ ಮೂಲಕ ಸಾರ್ವಜನಿಕ ಗಮನಕ್ಕೆ ತರಲಾಗಿದೆ. ಈ ಬಗ್ಗೆ ತಕರಾರು ಸಲ್ಲಿಸಬಯಸುವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂ ರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ ಧಾರವಾಡ ಹಾಗೂ ಮರಅಧಿಕಾರಿಯವರಿಗೆ ಅರಣ್ಯ ಸಂಕೀರ್ಣ ಕೆ.ಸಿ.ಪಾರ್ಕ ಎದುರು ಧಾರವಾಡದಲ್ಲಿ ಇರುವ ಅವರ ಕಛೇರಿಯಲ್ಲಿ ಲಿಖಿತ ರೂಪದಲ್ಲಿ ಮೇ 08, 2026 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಧಾರವಾಡ ಉಪ ವಿಭಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆ: ಅಭಿನಂದನಾ ಸಮಾರಂಭ



**ಬೆಳಗಾವಿ ವಾರ್ತೆ ಉಗರಗೋಳ:** ದೇಶದ ನಾನಾ ರಾಜ್ಯಗಳಿಂದ ಲಕ್ಷಾಂತರ ಭಕ್ತರನ್ನು ಹೊಂದಿದ ಶ್ರೀಕ್ಷೇತ್ರದಲ್ಲಿ. ದೇವಸ್ಥಾನದ ಕಾರ್ಮಿಕರಿಂದ ಶ್ರೀದೇವಿಯ ಗುಡಿಯ ಪವಳಿ ಹಾಗೂ ಕ್ಷೇತ್ರ ಸ್ವಚ್ಚತೆಯಿಂದ ಕೂಡಿದೆ ಎಂದು ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಧರ್ಶಿ ಪ್ರಭಾವತಿ ಫಕಿರಪೂರ ಹೇಳಿದರು ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡದ ಯಲ್ಲಮ್ಮ ದೇವಸ್ಥಾನದ ಆವರಣದಲ್ಲಿ ಬುಧವಾರ ರಂದು ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಅಂಗವಾಗಿ ಶ್ರೀರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಹಮ್ಮಿಕೊಂಡ ಅಭಿನಂದನಾ ಸಮಾರಂಭದ ಕಾರ್ಯಕ್ರಮಕ್ಕೆ ದೀಪ ಬೆಳಗಿಸಿ ಮಾತನಾಡಿದ ಅವರು. ಸ್ವಚ್ಚತೆಯ ಜೊತೆಗೆ ಪರಸರ ರಕ್ಷಣೆಗೆ ಆದ್ಯತೆ ನೀಡಬೇಕೆಂದ ಅವರು ಕಾರ್ಮಿಕರು ತಮ್ಮ ಸೇವೆಯನ್ನು ಅತ್ಯಂತ ನಿಷ್ಠೆಯಿಂದ ಕೈಗೂಡಿಸಿದ್ದು ನಿಜವಾಗಿಯೂ ಶ್ಲಾಘನೀಯ ಎಂದರು.

ಎಲ್ಲ ಕಾರ್ಮಿಕರನ್ನು ಶಾಲೂಹೊದಿಸಿ ಸನ್ಮಾನಿಸಲಾಯಿತು. ಡಾ.ಮಹಾಂತೇಶ ಸ್ವಾಮಿಗಳು ಆರಾಧ್ರಿಮಠ ರಾಜ್ಯ ಧಾರ್ಮಿಕ ಪರಿಷತ್ ಸದಸ್ಯರು, ಮುಜರಾಯಿ ಇಲಾಖೆ, ಶ್ರೀಮತಿ ಗೀತಾ ಈ ಕೌಲಗಿ ಮಾನ್ಯ ಆಯುಕ್ತರು ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ, ಶ್ರೀಮತಿ ಜ್ಯೋತಿ ಕಾಂಟೇ ಯೋಜನಾ ನಿರ್ದೇಶಕರು ಜಿಲ್ಲಾ ಬಾಲಕಾ ರ್ಮಿಕ ಶಾಖೆ ಬೆಳಗಾವಿ, ಶ್ರೀ ನಾಗರತ್ನಾ ಚೋಳಿನ, ಉಪಕಾರ್ಯದರ್ಶಿಗಳು, ಆರ್ ಎಚ್ ಸವದತ್ತಿ, ಶೀತಲ ಕಡಟ್ಟಿ, ಎಸ್ ಆರ್ ಈಟಿ, ಮಂಜು ಪವಾರ, ಅನೀಲ ಗುಡಿಮನಿ ಹಾಗೂ ಕಾರ್ಮಿಕರು, ದೇವಸ್ಥಾನ ಸಿಬ್ಬಂದಿ ಇದ್ದರು.

# ಅಪಾರ ಭಕ್ತವೃಂದ ಹೊಂದಿರುವ ಮೃತ್ಯುಂಜಯ ಶ್ರೀ



**ಬೆಳಗಾವಿ ವಾರ್ತೆ ನವಲಗುಂದ:** ನಾಡಿನೆಲ್ಲೆಡೆ ಆಧ್ಯಾತ್ಮ ಪ್ರವಚನ ಮೂಲಕ ಭಕ್ತ ಸಮೂಹದಲ್ಲಿ ಸನ್ಮಾರ್ಗದ ಸಂದೇಶಗಳನ್ನು ನೀಡುವುದರೊಂದಿಗೆ ಅಪಾರ ಭಕ್ತ ವೃಂದವನ್ನು ಹೊಂದಿರುವ ಮಣಕವಾಡ ಗ್ರಾಮದ ಅಭಿನವ ಶ್ರೀ ಮೃತ್ಯುಂಜಯ ಸ್ವಾಮಿಗಳು ಪ್ರವಚಣ ಮಾಣಿಕ್ಯರೆಂಬ ಖ್ಯಾತಿ ಗಳಿಸಿದ್ದಾರೆಂದು ಪಂಚಗ್ರಹ ಹಿರೇಮಠದ ಶ್ರೀ ಸಿದೇಶ್ವರ ಶಿವಾಚಾರ್ಯ ಸ್ವಾಮಿಜಿ ನುಡಿದರು

ಅವರು ಪಂಚಗ್ರಹ ಹಿರೇಮಠದ ಗುರುಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಆಯೋಜಿಸಿದ 11 ದಿನಗಳ ನಿರಂತರ ಪ್ರವಚನ ಕಾರ್ಯಕ್ರಮದಲ್ಲಿ ಮಣಕವಾಡ ಶ್ರೀ ಮೃತ್ಯುಂಜಯ ಸ್ವಾಮಿಗಳ ಜನ್ಮ ದಿನಾಚಣೆಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಗವಿಮಠದ ಶ್ರೀ ಬಸವಲಿಂಗಸ್ವಾಮಿಜಿ ಮಾತನಾಡಿ ಮಣಕವಾಡ ಶ್ರೀಗಳು ಗುರು ಪಟ್ಟಾಧಿಕಾರ ಮಹೋತ್ಸವ ಅಂಗವಾಗ ನಿರಂತರ 11 ದಿನಗಳ ಪ್ರವಚನವನ್ನು ಹೇಳುವ ಮೂಲಕ ಪಟ್ಟಣದ ಭಕ್ತರಲ್ಲಿ ಆಧ್ಯಾತ್ಮಿಕ ಚಿಂತನೆಯಲ್ಲಿ ತೊಡಗಿಸಿ ಆಧ್ಯಾತ್ಮ ಜ್ಞಾನ ಬಿತ್ತರುಸುತ್ತಿರುವುದ ಭಕ್ತರಲ್ಲಿ ಹರ್ಷವನ್ನುಂಟು ಮಾಡಿದೆ ಎಂದರು.

ಶಾಸಕ ಎನ್.ಎಚ್.ಕೋನರಡ್ಡಿ ಮಾತನಾಡಿ ಕಳೆದ 6 ದಿನಗಳಿಂದ ಮಣಕವಾಡ ಶ್ರೀಗಳು ಪಟ್ಟಣದಲ್ಲಿ ಪ್ರವಚನ ಆರಂಭಿಸಿದಾಗಿನಿಂದ ಸಾವಿರಾರು ಜನ ಪ್ರವಚನ ಆಲಿಸಲು ಬರುತ್ತಿರುವುದು ಜನತೆಲ್ಲಿರು ಆಧ್ಯಾತ್ಮತ ಹಸಿವಿಗೆ ಸಾಕ್ಷಿಯಾಗಿದೆ ಎಂದರು.

ಹಿರೇಮಠದ ನಿಯೋಜಿತ ಪಿಠಾಧೀಕಾರಿ ಶ್ರೀ ವೀರಬಸವ ದೇವರು, ಹಿರಿಯರಾದ ಅಣ್ಣಪ್ಪ ಬಾಗಿ, ಸಿದ್ದಲಿಂಗಯ್ಯ ಹಿರೇಮಠ, ಎಂ,ಡಿ, ಕುಲಕರ್ಣಿ, ಶ್ರೀಶೈಲ ಮೂಲಿಮನಿ,ಗಂಗಪ್ಪ ಹಳ್ಳದ ,ಪಾಂಡಪ್ಪ ಕೋನರಡ್ಡಿ, ಮಲ್ಲಿ ಕಾರ್ಜುನ ಜಲಾದಿ,ಯಲ್ಲಪ್ಪ ಭೋವಿ, ಅಪ್ಪಣ್ಣ ಹಳ್ಳದ, ಎ.ಬಿ.ಕೊಪ್ಪದ, ಆರ್, ಎಸ್,ನೇಗಲಿ ಸೇರಿದಂತೆ ಸಾವಿರಾರ ಭಕ್ತರು ಉಪಸ್ಥಿತರಿದ್ದರು.

# ಹುಬ್ಬಳ್ಳಿ: ವಾರ್ಷಿಕ ಸಾಮಾನ್ಯ ಸಭೆ




**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಯಾವುದೇ ಒಂದು ಸಂಸ್ಥೆ ಅಥವಾ ಕಂಪನಿ ಯಶಸ್ವಿಯಾಗಿ ಮುನ್ನಡೆಯಲು ಆ ಸಂಸ್ಥೆಯ ಸಿಬ್ಬಂದಿ ಮತ್ತು ಅಧಿಕಾರಿಗಳ ಪಾತ್ರ ಹಿರಿದಾಗಿದೆ ಎಂದು ಮಹಾಲಕ್ಷ್ಮಿ ಇಂಪ್ಲಿಮೆಂಟ್ಸ್ ಸಂಸ್ಥೆಯ ಎಂ ಡಿ ಗಂಗಯ್ಯ ಹಿರೇಮಠ ಹೇಳಿದರು.

ದಾಂಡೇಲಿಯ ಖಾಸಗಿ ರೆಸಾರ್ಟ್ವೊಂದರಲ್ಲಿ ಇತ್ತೀಚೆಗೆ ಏರ್ಪಡಿಸಿದ್ದ ಮಹಾಲಕ್ಷ್ಮಿ ಇಂಪ್ಲಿಮೆಂಟ್ಸ್ ಸಂಸ್ಥೆಯ 2025–26ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಹಕರ ನಂಬಿಕೆ ಮತ್ತು ವಿಶ್ವಾಸಕ್ಕೆ ಧಕ್ಕೆ ಬರದಂತೆ ಅತ್ಯುತ್ತಮ ಕೃಷಿ ಉಪಕರಣಗಳು ಹಾಗೂ ಪೈಪ್‌ಗಳನ್ನು ತಯಾರಿಸಿಕೊಡುತ್ತಿರುವ ಮಹಾಲಕ್ಷ್ಮಿ ?? ಇಂಪ್ಲಿಮೆಂಟ್ಸ್ ಮತ್ತು ಕರಿಬಸವೇಶ್ವರ ಅಗ್ರಿ ಇಂಡಿಯಾ ಪ್ರೈ.ಲಿ. ಮಾದರಿಯಾಗಿ ಬೆಳೆಯುತ್ತಿದೆ ಎಂದರು. ಸಮೂಹ ಸಂಸ್ಥೆಯ ಸಿಇಒ ವಿನಯಕುಮಾರ ಬನ್ನಿಕೊಪ್ಪ ಮಾತನಾಡಿ, ಪ್ರತಿಯೊಬ್ಬ ಸಿಬ್ಬಂದಿಯನ್ನು ಸಂಸ್ಥೆಯ ಮಾಲೀಕರು ಕುಟುಂಬದ ಸದಸ್ಯರಂತೆ ಕಾಣುತ್ತಿದ್ದಾರೆ. ಈ ಸಂಸ್ಥೆಯಲ್ಲಿ ಕೆಲಸ ಮಾಡುವವರಿಗೆ ಸಹೋದರತೆಯ ಭಾವನೆ ಬರುತ್ತದೆ. ಇದು ನಮ್ಮದೇ ಕಂಪನಿ ಎಂದು ಪ್ರಾಮಾಣಿಕವಾಗಿ ಕೆಲಸ ಮಾಡುವ ಮೂಲಕ ನಾವೆಲ್ಲರೂ ಒಟ್ಟಾಗಿ ಕಂಪನಿಯನ್ನು ಬೃಹದಾಕಾರವಾಗಿ ಕಟ್ಟೋಣ ಎಂದು ಹೇಳಿದರು.ನಂತರ ಮಹಾಲಕ್ಷ್ಮಿ ಇಂಪ್ಲಿಮೆಂಟ್ಸ್, ಕರಿಬಸವೇಶ್ವರ ಅಗ್ರಿ ಇಂಡಿಯಾ ಪ್ರೈ.ಲಿ., ಮಹಾಲಕ್ಷ್ಮಿ ಸಹಕಾರ ಸಂಘ ಹಾಗೂ ವಿನಾಯಕ ಇಂಡಸ್ಟ್ರೀಸ್ ಸಮೂಹ ಸಂಸ್ಥೆಯಲ್ಲಿ ಸಾಧನೆ ಮಾಡಿದ ಎಲ್ಲ ಸಿಬ್ಬಂದಿಗೆ ಬಹುಮಾನ ವಿತರಣೆ ಮಾಡಲಾಯಿತು. ಅದ್ವಿತೀಯ ಸಾಧನೆ ಮಾಡಿದ ಮಹಾಲಕ್ಷ್ಮಿ ಇಂಪ್ಲಿಮೆಂಟ್ಸ್ನ ಐದು ಶಾಖೆಗಳಿಗೆ ಮಾರುತಿ ಕಾರು ವಿತರಿಸಲಾಯಿತು.

ಸಮೂಹ ಸಂಸ್ಥೆಯ ಮಾಲೀಕರಾದ ಯಶೋದಾ ಜಿ.ಹಿರೇಮಠ, ಸಿಬ್ಬಂದಿ ಸಿದ್ಧಲಿಂಗಯ್ಯ ಹಿರೇಮಠ, ಸುದರ್ಶನ ಉಪಾಧ್ಯ ಸೇರಿದಂತೆ ಅಧಿಕಾರಿ ಮತ್ತು ಸಿಬ್ಬಂದಿ ಹಾಜರಿದ್ದರು.

# “ಕನ್ನಡ ನಾಡಿನ ಅಸ್ಮಿತೆಯ ಪ್ರತೀಕವೇ ಕನ್ನಡ ಸಾಹಿತ್ಯ ಪರಿಷತ್ತು”




**ಬೆಳಗಾವಿ ವಾರ್ತೆ ಲಕ್ಷೇಶ್ವರ:** “ಕನ್ನಡ ನಾಡಿನ ಅಸ್ಮಿತೆಯ ಪ್ರತೀಕವೇ ಕನ್ನಡ ಸಾಹಿತ್ಯ ಪರಿಷತ್ತು. ಕನ್ನಡ ನಾಡು–ನುಡಿಯ ಸಂರಕ್ಷಣೆ ಮತ್ತು ಕನ್ನಡ ಭಾಷೆಗಾಗಿ ಶ್ರಮಿಸಲು ಕಟ್ಟಲಾಗಿರುವ ಸಮಸ್ತ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾಗಿದೆ” ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಅಭಿಪ್ರಾಯಪಟ್ಟರು. ಅವರು ಲಕ್ಷೇಶ್ವರದ ಸಕ್ಸಸ್ ಕ್ಲಾಸಸ್ ನಲ್ಲಿ ಲಕ್ಷೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿದ ಕ.ಸಾ.ಪ ಲಕ್ಷೇಶ್ವರ ತಾಲೂಕಾ ಘಟಕದ ಸಂಘಟನಾ ಕಾರ್ಯದರ್ಶಿ,ಸಾಹಿತಿ ನಾಗರಾಜ ಮಜ್ಜಿಗುಡ್ಡ “ಕನ್ನಡ ಸಾಹಿತ್ಯ ಪರಿಷತ್ 1915 ಮೇ 5ರಂದು ಶ್ರೀ ಕೃಷ್ಣರಾಜ ಪರಿಷನ್ಮಂದಿರದಲ್ಲಿ ಆಗಿನ ಮೈಸೂರು ಅರಸರಾಗಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ಸ್ಥಾಪಿಸಲ್ಪಟ್ಟಿತ್ತು. ಆರಂಭವಾಗುವಾಗ ‘ಕರ್ನಾಟಕ ಸಾಹಿತ್ಯ ಪರಿಷತ್’ ಎಂದು ನಾಮಕರಣಗೊಂಡರೂ ಮುಂದೆ 1935ರಲ್ಲಿ ಕನ್ನಡ ಸಾಹಿತ್ಯ ಪರಿಷತ್ ಎಂದು ಮರು ನಾಮಕರಣಗೊಂಡಿತು” ಎಂದು ತಿಳಿಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಲಕ್ಷೇಶ್ವರ ಪೌರಸೇವಾ ಸಾಧಕ ಬಸವಣ್ಣೆಪ್ಪ ನಂದೆಣ್ಣವರ “ಯಾವುದೇ ಪ್ರಶಸ್ತಿ,ಗೌರವ ಬಯಸದೇ ನಾಲ್ಕು ದಶಕಗಳ ಕಾಲ ಲಕ್ಷೆ ??ೀಶ್ವರದ ಪೌರ ಸೇವೆ ಮಾಡಿದ ನಮ್ಮಂತವರನ್ನು ಗುರುತಿಸಿ ಗೌರವಿಸಿದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಸ್ತುತ್ಯಾರ್ಹ” ಎಂದರು.

ಭಾಗವಹಿಸಿ ಮಾತನಾಡಿದ ಹಿರಿಯ ಸಾಹಿತಿ ಎಸ್.ಎಫ್.ಆದಿ ” ಕನ್ನಡ ಸಾಹಿತ್ಯ ಪರಿಷತ್ತು ಕನ್ನಡದ ಶ್ರೀಮಂತ ಪರಂಪರೆಯನ್ನು ಮತ್ತಷ್ಟು ಸಮೃದ್ಧಗೊಳಿಸುತ್ತಿದೆ. ಅದರಲ್ಲೂ ಗದಗ ಜಿಲ್ಲಾ ಘಟಕ ಹಾಗೂ ಲಕ್ಷೇಶ್ವರ ತಾಲೂಕ ಘಟಕಗಳು ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಅತ್ಯಂತ ಕ್ರಿಯಾಶೀಲವಾಗಿವೆ” ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಲಕ್ಷೇಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಈಶ್ವರ ಮೆಡ್ಲೇರಿ “ತಿರುಳ್ಗನ್ನಡ ನೆಲವಾದ ಪುಲಿಗೆರೆ ಅಂದರೆ ಈಗಿನ ಲಕ್ಷೇಶ್ವರ ಪ್ರಾಚೀನ ಕಾಲದಿಂದಲೂ ಕನ್ನಡ,ಕನ್ನಡತನದ ಜಾಗೃತಿಯ ನಾಡು. ಹಾಗಾಗಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ರಚನಾತ್ಮಕವಾದ ಕಾರ್ಯಕ್ರಮಗಳನ್ನು ನಿರಂತರವಾಗಿ ಸಂಘಟಿಸಲು ಸಾಧ್ಯವಾಗುತ್ತಿದೆ” ಎಂದರು.

ಖ್ಯಾತ ಗಾಯಕ ಮಂಜುನಾಥ ಉಮಚಗಿ ಕನ್ನಡ ಗೀತ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಕನ್ನಡ ಭಾಷಾಭಿಮಾನದ ಹಲವಾರು ಗೀತೆಗಳನ್ನು ಹಾಡಿ ರಂಜಿಸಿದರು. ಶಿಕ್ಷಕರಾದ ರಾಜೇಶ ಶೆಟ್ಟರ, ನಾಗರಾಜ ಶರಣಾರ್ಥಿ ಮುಖ್ಯ ಅತಿಥಿಗಳಾಗಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಾಧಕರು,ಉದ್ಘಾಟಕರು ಉಪನ್ಯಾಸಕರು,ಅತಿಥೇಯರು, ಗಾಯಕರನ್ನು ಸನ್ಮಾನಿಸಲಾಯಿತು.

ಕ.ಸಾ.ಪ ತಾಲೂಕ ಘಟಕದ ಎಸ್.ಬಿ.ಅಣ್ಣಿಗೇರಿ ಸ್ವಾಗತಿಸಿದರು. ಶಂಕರ ಶಿಳ್ಳಿನ ವಂದಿಸಿದರು. ಶಿಕ್ಷಕ ಪ್ರಕಾಶ ಜ್ಯೋತಿ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕರಾದ ಪ್ರಭು ಹಾಲಗುಂಡಿ, ಆರ್.ಎಸ್.ಪಾಟೀಲ, ವೈ.ಎಂ.ಶಿರೂರು ಉಪಸ್ಥಿತರಿದ್ದರು. ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಪ್ರಗತಿ ಪರಿಶೀಲನಾ ಸಭೆ



**ಬೆಳಗಾವಿ ವಾರ್ತೆ ನವಲಗುಂದ:** ಮುಂಗಾರು ಹಂಗಾಮಿನಲ್ಲಿ ರೈತರ ಬಿತ್ತನೆ ಕಾರ್ಯಕ್ಕೆ ತೊಂದರೆಯಾಗದಂತೆ ಕೃಷಿ ಇಲಾಖೆ ಸಕಲ ಸಿದ್ಧತೆ ಮಾಡಿಕೊಳ್ಳಬೇಕು. ರೈತರಿಗೆ ಗುಣಮಟ್ಟದ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳನ್ನು ನಿಗದಿತ ದರದಲ್ಲಿ ಪೂರೈಸಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಶಾಸಕ ಎನ್ ಎಚ್ ಕೋನರಡ್ಡಿ ಸೂಚನೆ ನೀಡಿದರು.

ಪಟ್ಟಣದ ವಾಲ್ಮೀಕಿ ಸಭಾಭವನದಲ್ಲಿ ನವಲಗುಂದ, ಅಣ್ಣಿಗೇರಿ ಮತ್ತು ಹುಬ್ಬಳ್ಳಿ ತಾಲ್ಲೂಕಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದರು.

ನವಲಗುಂದ ಅಣ್ಣಿಗೇರಿ ಪಟ್ಟಣವೂ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಕೆರೆಗಳಿಗೆ ಮಲಪ್ರಭಾ ಕಾಲುವೆ ನೀರನ್ನು ತುಂಬಿಸಿ ತೊಂದರೆಯಾಗದ ರೀತಿ ಆಯಾ ಭಾಗದ ಅಧಿಕಾರಿಗಳು ಎಚ್ಚರ ವಹಿಸಬೇಕು. ಬೇಸಿಗೆ ಇರುವುದರಿಂದ ನೀರಿನ ಅಭಾವವಾಗದಂತೆ ಕೂಡಲೇ ಅಗತ್ಯ ಮುನ್ನೆಚ್ಚರಿಕಾ ಕ್ರಮಕೈಗೊಳ್ಳಬೇಕು ಎಂದು ನಿರ್ದೇಶಿಸಿದರು.

ತಾಲ್ಲೂಕಿನಾದ್ಯಂತ ಅಕ್ರಮ ಸಾರಾಯಿ ದಂಧೆ ಬಗ್ಗೆ ಶಾಸಕರು ತಾಲೂಕ ಅಬಕಾರಿ ನಿರೀಕ್ಷಕರಿಂದ ಮಾಹಿತಿ ಪಡೆದು ಇದಕ್ಕೆ ಸಂಪೂರ್ಣ ಕಡಿವಾಣ ಹಾಕಬೇಕು ಎಂದು ತಿಳಿ ಹೇಳಿದರು.

ತಹಶೀಲ್ದಾರರಾದ ಸುಧೀರ ಸಾಹುಕಾರ, ಮಂಜುನಾಥ ದಾಸಪ್ಪನವರ, ಜೆ.ಬಿ. ಮಜ್ಜಗಿ, ತಾ.ಪಂ. ಇಒ ರವೀಂದ್ರಗೌಡ ಪಾಟೀಲ, ಆರ್. ಎಂ. ಹೊಸಮನಿ, ಸಿಪಿಐ ರವಿ ಕಪ್ಪತ್ತನವರ, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ವರ್ಧಮಾನಗೌಡ ಹಿರೇಗೌಡ್ರ, ಶಿವಾನಂದ ಭೂಮಣ್ಣವರ, ಡಿಡಿಪಿಐ ಉಮೇಶ ಬೊಮ್ಮಕ್ಕನವರ, ಸೋಮನಗೌಡ ಪಾಟೀಲ, ರಾಘವೇಂದ್ರ ಜಾಲಗಾರ,ಮನೋಹರ ದ್ಯಾಬೇರಿ, ಗಾಯತ್ರಿ ಪಾಟೀಲ ಡಾ. ಎನ್ ಬಿ ಕಾಲವಾಡ, ಎಸ್ ಎಸ್ ಲಂಗೂಟಿ, ಎಸ್.ಪಿ. ಪೂಜಾರ, ವಾಯ್.ಜಿ. ಗದ್ದಿಗೌಡರ, ಅಬೀದಾ ಮುಲ್ಲಾನವರ ಸೇರಿದಂತೆ ತಾಲ್ಲೂಕಾ ಕೆಡಿಪಿ ನಾಮನಿರ್ದೇಶಿತ ಸದಸ್ಯರು, ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ತುಲಾಭಾರ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಅಮ್ಮಿನಭಾವಿ:** ಧಾರವಾಡ ತಾಲೂಕಿನ ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಕಿರಿಯ ಶ್ರೀಗಳಾದ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಅವರ ಪ್ರಥಮ ತುಲಾಭಾರ ಮೃತ್ಯುಂಜಯ ನಗರದ ಬಳಿ ಇರುವ ಗಾಯಕವಾಡ ಕಲ್ಯಾಣ ಮಂಟಪದಲ್ಲಿ ನಡೆಯಿತು.

ಗ್ರಾ.ಪಂ. ಮಾಜಿ ಅಧ್ಯಕ್ಷ ಜಗನ್ನಾಥ ಕುಸೂಗಲ್ಲ ಹಾಗೂ ಶ್ರೀಶೈಲ ಅವರು ತುಲಾಭಾರವನ್ನು ಜರುಗಿಸಿದರು.

ಈರಣ್ಣ ಕುಸೂಗಲ್ಲ, ರಾಚಪ್ಪ ಕುಸೂಗಲ್ಲ. ಸುನೀಲ ಗುಡಿ, ರಮೇಶ ಕುಸೂಗಲ್ಲ, ಚಂದ್ರಶೇಖರ ಕುಸೂಗಲ್ಲ, ನಿಂಗಪ್ಪ ದೊಡವಾಡ, ದೇವೇಂದ್ರಪ್ಪ ಕುಸೂಗಲ್ಲ, ರವಿ ಇಂದೂರ, ಈಶ್ವರಪ್ಪ ಕುಸೂಗಲ್ಲ, ಮಹಾಂತೇಶ ಕಡ್ಲೆಪ್ಪನವರ, ನಾಗರಾಜ ಮೈಲಾರ ಹೊಂಬಳ, ಮುತ್ತಪ್ಪ ಕೆರಿ, ಸದಾನಂದ ಮುಂದಿನಮನಿ, ಮುತ್ತಪ್ಪ ಹನಸಿ, ಸೋಮಲಿಂಗಶಾಸ್ತ್ರಿ ಗುಡ್ಡದಮಠ ಇದ್ದರು.

# IIT ಧಾರವಾಡದಲ್ಲಿ ಇಂಟರ್ನ್‌ಶಿಪ್ ಅವಕಾಶ

**ಬೆಳಗಾವಿ ವಾರ್ತೆ ಧಾರವಾಡ:** ಭಾರತೀಯ ತಂತ್ರಜ್ಞಾನ ಸಂಸ್ಥೆ (IIT ಧಾರವಾಡ) ತನ್ನ ವೃತ್ತಿ ಅಭಿವೃದ್ಧಿ ಕೋಶದಲ್ಲಿ (Career Development Cell) ಇಂಟರ್ನ್‌ಶಿಪ್ ಅವಕಾಶಗಳನ್ನು ಘೋಷಿಸಿದೆ. ವೃತ್ತಿ ಮಾರ್ಗದರ್ಶನ, ಸಂಸ್ಥಾ ಕಾರ್ಯಾಚರಣೆ ಮತ್ತು ಪ್ಲೇಸ್ಮೆಂಟ್ ಚಟುವಟಿಕೆಗಳಲ್ಲಿ ಪ್ರಾಯೋಗಿಕ ಅನುಭವ ಪಡೆಯಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳಿಗೆ ಇದು ಉತ್ತಮ ಅವಕಾಶವಾಗಿದೆ.

ಬಿ.ಎಸ್‌ಸಿ, ಬಿಸಿಎ, ಬಿ.ಟೆಕ್, ಎಂಸಿಎ, ಎಂ.ಎಸ್‌ಸಿ ಅಥವಾ ಸಂಬಂಧಿತ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಂಗಳಿಗೆ ?20,000 ಗೌರವಧನ ನೀಡಲಾಗುತ್ತದೆ.

ಇಂಟರ್ನ್‌ಶಿಪ್ ಅವಧಿ 6 ತಿಂಗಳಾಗಿದ್ದು, ಕಾರ್ಯಕ್ಷಮತೆಯ ಆಧಾರದ ಮೇಲೆ ವಿಸ್ತರಣೆ ಸಾಧ್ಯತೆ ಇದೆ. ಆಯ್ಕೆ ಪ್ರಕ್ರಿಯೆ ನೇರ ಸಂದರ್ಶನದ ಮೂಲಕ ನಡೆಯಲಿದ್ದು, ಅಭ್ಯರ್ಥಿಗಳ ಸಂವಹನ ಕೌಶಲ್ಯ, ಸಂಘಟನಾ ಸಾಮರ್ಥ್ಯ ಮತ್ತು ವೃತ್ತಿ ಸೇವೆಗಳ ಮೇಲಿನ ಆಸಕ್ತಿಯನ್ನು ಪರಿಗಣಿಸಲಾಗುತ್ತದೆ.

ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು ಐಐಟಿ ಧಾರವಾಡದ ಅಧಿಕೃತ ವೆಬ್‌ಸೈಟ್ ಅಥವಾ ಪ್ರಕಟಣೆಯಲ್ಲಿ ನೀಡಿದ್ದು ಐಐಟಿ ಧಾರವಾಡದ Career Development Cell (CDC) ಅಧಿಕೃತ ವೆಬ್‌ಸೈಟ್ ಮೂಲಕ ನೋಂದಣಿ ಮಾಡಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮೇ 15, 2026 ಆಗಿದೆ.

ಈ ಇಂಟರ್ನ್‌ಶಿಪ್ ಮೂಲಕ ವಿದ್ಯಾರ್ಥಿಗಳು ಹಾಗೂ ಹೊಸ ಪದವೀಧರರು ಉನ್ನತ ಶಿಕ್ಷಣ ಸಂಸ್ಥೆಯ ಒಳಾಂಗಣ ಕಾರ್ಯವೈಖರಿ, ಪ್ಲೇಸ್ಮೆಂಟ್ ಪ್ರಕ್ರಿಯೆಗಳು ಮತ್ತು ವಿದ್ಯಾರ್ಥಿ ಸೇವೆಗಳ ಕುರಿತು ನೈಜ ಅನುಭವ ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ಭವಿಷ್ಯದ ಉದ್ಯೋಗಾವಕಾಶಗಳಿಗೆ ಉತ್ತಮ ವೇದಿಕೆ ಸಿಗಲಿದೆ.

# ಪ್ರಮಾಣ ಪತ್ರ ವಿತರಣೆ



**ಬೆಳಗಾವಿ ವಾರ್ತೆ ಧಾರವಾಡ:** ಪ್ರತಿಯೊಬ್ಬ ಮಹಿಳೆಯೂ ಸ್ವಯಂ ಉದ್ಯೋಗದ ತರಬೇತಿ ಪಡೆದರೆ, ಕುಟುಂಬವನ್ನು ಆರ್ಥಿಕವಾಗಿ ಬಲಪಡಿಸಲು ಸಾಧ್ಯ ಎಂದು ಶಂಕರ ಹಲಗತ್ತಿ ಅವರು ಅಭಿಪ್ರಾಯಪಟ್ಟರು.

ನಗರದ ರಾ.ಹ.ದೇಶಪಾಂಡೆ ಸಭಾಭವನದಲ್ಲಿ ಯಶಸ್ವಿ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಮಹಿಳೆಯರ ಹೊಲಿಗೆ ತರಬೇತಿ ಕೇಂದ್ರದ ‘ಪ್ರೇರಣಾ ಶಿಬಿರ’ ಮತ್ತು ಪ್ರಮಾಣಪತ್ರ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡುತ್ತಿದ್ದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಲ್ಯಾಂಡ್ ಡೆವಲಪರ್ ಬುರಾನ್ ಜಕಾತಿ ಮಾತನಾಡಿ, “ಜೀವನದಲ್ಲಿ ಗುರಿ ಮತ್ತು ಗುರುವಿನ ಮಾರ್ಗದರ್ಶನ ಬಹಳ ಮುಖ್ಯ. ಮಹಿಳೆಯರು ಆರ್ಥಿಕವಾಗಿ ಸಬಲರಾದಾಗ ಸಮಾಜದಲ್ಲಿ ಗೌರವ ತಾನಾಗಿಯೇ ದೊರೆಯುತ್ತದೆ,” ಎಂದರು.

ಅತಿಥಿಗಳಾಗಿ ಭಾಗವಹಿಸಿದ್ದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅರವಿಂದ ಏಗನಗೌಡರ ಮಾತನಾಡಿ, “ಮಹಿಳೆಯೂ ಕುಟುಂಬದ ಶಕ್ತಿ. ಸರ್ಕಾರವು ಮಹಿಳೆಯರಿಗಾಗಿಯೇ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಅವರಿಗೆ ಆರ್ಥಿಕವಾಗಿ ದೊಡ್ಡ ಮಟ್ಟದ ಶಕ್ತಿ ತುಂಬಿದೆ. ತರಬೇತಿ ಪಡೆಯುತ್ತಿರುವ ಮಹಿಳೆಯರು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು,” ಎಂದು ತಿಳಿಸಿದರು.

ಅಕ್ಬರ್ ಕುರ್ತಕೋಟಿ ಸಂಸ್ಥೆಯ ಅಧ್ಯಕ್ಷರಾದ ಫರೀದಾ ಎಸ್. ಬೆಟಗೇರಿ ಮಾತನಾಡಿದರು.

ಅಸ್ಮಾಬಾನು ಎಚ್ ಶೇಖ್, ಮೊಹಮ್ಮದ್ ರಫೀಕ್ ಚಾಂದಖಾನವರ್, ಸಾಹಿತಿ ಮಹಮ್ಮದ ಅಲಿ ಗೂಡುಭಾಯಿ ಫರೀನ್ ಎಂ. ಕಲೇಗಾರ್ ಉಪಸ್ಥಿತರಿದ್ದರು.

# ಬಿ.ವಿ.ಎ ಪದವಿ ತರಗತಿಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: ಸರಕಾರಿ ಚಿತ್ರಕಲಾ ಮಹಾವಿದ್ಯಾಲಯ, ಧಾರವಾಡದಲ್ಲಿ 2026–27 ನೇ ಸಾಲಿಗೆ ಕರ್ನಾಟಕ ವಿಶ್ವವಿದ್ಯಾಲಯ ಬಿ.ವಿ.ಎ ಪದವಿ ತರಗತಿಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ ಉತ್ತೀರ್ಣ ಅಥವಾ ಐ.ಟಿ.ಐ., ಡಿಪ್ಲೋಮಾ ಅಥವಾ ಪಿಯುಸಿ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಅರ್ಹ ವಿದ್ಯಾರ್ಥಿಗಳು ಮೇ 30, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದು ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೂಡಲಗಿಯಲ್ಲಿ ಆರ್‌ಸಿಯು ವಲಯ ಮಟ್ಟದ ಕಬಡ್ಡಿ ಉದ್ಘಾಟನೆ

# ಕಬಡ್ಡಿಗೆ ಬೆಳಗಾವಿಯೇ ತವರು – ಹಾಲಪ್ಪಾ ಹುಕ್ಕೇರಿ



**ಬೆಳಗಾವಿ ವಾರ್ತೆ ಮೂಡಲಗಿ:** ಅಪ್ಪಟ ಗ್ರಾಮೀಣ ಆಟವಾದ ಕಬಡ್ಡಿ ಬೆಳಗಾವಿ ಜಿಲ್ಲೆಯ ಹಳ್ಳಿಗಾಡಿನ ಯುವಕರ ಏಕಮೇವ ನೆಚ್ಚಿನ ಆಟವಾಗಿ ಬೆಳೆದು ಬಂದಿದ್ದು ಇಲ್ಲಿಯ ಆಟಗಾರರು ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಕಬಡ್ಡಿಯನ್ನು ಕೊಂಡೊಯ್ದಿದ್ದು ಹೀಗಾಗಿ ಕಬಡ್ಡಿ ಗೆ ಬೆಳಗಾವಿಯೇ ತವರಾಗಿದೆ ಎಂದು ಬೆಳಗಾವಿ ಜಿಲ್ಲಾ ಅಮೆಚೂರು ಕಬಡ್ಡಿ ಅಸೋಷಿಯೇಷನ್ ಪ್ರಧಾನ ಕಾರ್ಯದರ್ಶಿ ಹಾಲಪ್ಪ ಹುಕ್ಕೇರಿ ಅಭಿಪ್ರಾಯಪಟ್ಟರು

ಅವರು ಬುಧವಾರದಂದು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಹಾಗೂ ಕಲಾ ವಾಣಿಜ್ಯ ಹಾಗೂ ಬಿಸಿ ಎ ಮಹಾವಿದ್ಯಾಲಯಗಳ ಸಂಯುಕ್ತ ಆಶ್ರಯದಲ್ಲಿ ಜರುಗುತ್ತಿರುವ ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಸನ್ 2025.26 ನೇ ಸಾಲಿನ ವಲಯ ಹಾಗೂ ಅಂತರ ವಲಯ ಪುರುಷರ ಕಬಡ್ಡಿ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಬೆಳಗಾವಿ ಜಿಲ್ಲೆಯ ಕಬಡ್ಡಿ ಆಟಗಾರರ ಪ್ರೇಕ್ಷಕರ ಅಭಿಮಾನಿಗಳ ಸಂಘ ಸಂಸ್ಥೆಗಳ ಸಹಕಾರ ಮತ್ತು ಆಶೀರ್ವಾದ ಒಂದಿದ್ದರೆ ಬೆಳಗಾವಿ ಜಿಲ್ಲೆಯಲ್ಲಿ ಪ್ರೋ ಕಬಡ್ಡಿ ಸಂಘಟಿ ಸುವದಾಗಿ ಹಾಲಪ್ಪ ಹೇಳಿದರು.

ಮೂಡಲಗಿ ಶಿಕ್ಷಣ ಸಂಸ್ಥೆಯವರು ಸದಾ ಕ್ರೀಡೆಗಳಿಗೆ ಪ್ರೋತ್ಸಾಹಿಸಿ ಆಟಗಳನ್ನು ಸಂಘಟಿಸುತ್ತಿರುವದು ಮೆಚ್ಚುವಂತದ್ದಾಗಿದೆ ಎಂದರು

ಅಧ್ಯಕ್ಷತೆಯನ್ನು ವಹಿಸಿದ್ದ ಮೂಡಲಗಿ ಶಿಕ್ಷಣ ಸಂಸ್ಥೆಯ ಚೇರಮನ್ ವೆಂಕಟೇಶ ಸೋನವಾಲ್ಕರ ಮಾತನಾಡಿ ಕ್ರೀಡೆಗಳಲ್ಲಿ ನಿರ್ಣಾಯಕರ ನಿರ್ಣಯಕ್ಕೆ ಬದ್ದರಾಗಿರುವುದು ಬಹಳ ಮಹತ್ವದಾಗಿರುತ್ತದೆ ಕ್ರೀಡಾ ಪಟುಗಳು ಕ್ರೀಡಾ ಮನೋ ಭಾವ ದಿಂದ ಆಟ ಆಡಬೇಕು ಯಾವುದೇ ವಾದವಿವಾದಗಳಿಗೆ ಆಸ್ಪದ ಮಾಡಿ ಕೂಡಬಾರದೆಂದು

ಇದೇ ಸಂದರ್ಭದಲ್ಲಿ ಬೆಳಗಾವಿ ಜಿಲ್ಲಾ ಅಮೆಚೂರು ಕಬಡ್ಡಿ ಅಸೋಷಿಯೇಶನ್ ಪ್ರಧಾನ ಕಾರ್ಯದರ್ಶಿ ಹಾಲಪ್ಪ ಹುಕ್ಕೇರಿ ಹಾಗೂ ಕ್ರೀಡಾಪಟುಗಳಿಗೆ ಸಮವಸ್ತ್ರ ಕೊಡುಗೆ ನೀಡಿದ ಮಂಜುನಾಥ ಸೈನಿಕ ತರಬೇತಿ ಸಂಸ್ಥೆಯ ಅಧ್ಯಕ್ಷ ಲಕ್ಷ್ಮಣ ಅಡಿಹುಡಿ ಅವರನ್ನು ಮೂಡಲಗಿ ಶಿಕ್ಷಣ ಸಂಸ್ಥೆಯ ಪರವಾಗಿ ಶಾಲು ಹೊದಿಸಿ ಫಲಪುಷ್ಪಗಳನ್ನು ನೀಡಿ ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಮೂಡಲಗಿ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಆರ್. ಪಿ. ಸೋನವಾಲ್ಕರ, ನಿರ್ದೇಶಕ ಎ ವ್ಹಿ. ಹೊಸಕೋಟಿ, ಲಕ್ಷ್ಮಣ ಅಡಿಹುಡಿ ಆಡಳಿತಾಧಿಕಾರಿ ಡಾ. ಎಸ್. ಎಲ್ ಚಿತ್ರಗಾರ ಪ್ರಾಚಾರ್ಯ ಡಾ. ಎಮ್ . ಕೆ. ಕಂಕಣವಾಡಿ ಕ್ರೀಡಾ ವಿಭಾಗ ದ ಅಧ್ಯಕ್ಷರುಗಳಾದ ಪ್ರೊ ಎಲ್. ಬಿ . ಮಣ್ಣಾಪುರೆ ಪ್ರೊ ಪಿ ಬಿ ಚೌಡಕಿ ಸಂಘಟನಾ ಕಾರ್ಯದರ್ಶಿಗಳಾದ ಪ್ರೊ ಭೀಮಶಿ ಬಡಗಣ್ಣವರ ಪ್ರೊ ಬಿ ಎಸ್ ಕಂಬಾರ ಪ್ರೊ ಯಲ್ಲಪ್ಪ ಭರಮಣ್ಣವರ ಮಲ್ಲು ಮಳಲಿ ಪೂಜಾ ಗಲಗಲಿ ಗಿರೆಪ್ಪ ಮುಂತಾದವರು ಉಪಸ್ಥಿತರಿದ್ದರು

ಪ್ರೊ ಭೀಮಶಿ ಬಡಗಣ್ಣವರ ಸ್ವಾಗತಿಸಿದರು, ಪ್ರೊ ಸಂತೋಷ ಮುಗಳಿ ನಿರೂಪಿಸಿದರು,. ಪ್ರೊ ವೇದಾ ದೇಶಪಾಂಡೆ ವಂದಿಸಿದರು.

# ಇಂದಿನಿಂದ ಬೆಟಗೇರಿ ಬೀರಸಿದ್ದೇಶ್ವರ ದೇವರ ಜಾತ್ರಾ ಮಹೋತ್ಸವ

**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದ ಬೀರಸಿದ್ದೇಶ್ವರ ದೇವರ ಜಾತ್ರಾ ಮಹೋತ್ಸವ ಹಾಗೂ ದಾನಿಗಳಿಗೆ ಸತ್ಕಾರ ಸಮಾರಂಭ ಇದೇ ಶನಿವಾರ ಮೇ.9ರಿಂದ ರವಿವಾರ ಮೇ.11ರವರೆಗೆ ವಿಜೃಂಭನೆಯಿಂದ ನಡೆಯಲಿದೆ.

ಮೇ.9ರಂದು ಬೆಳಗ್ಗೆ 8ಗಂಟೆಗೆ ಬೀರಸಿದ್ದೇಶ್ವರ ದೇವರ ಗದ್ದುಗೆ ಮಹಾಪೂಜೆ, ಮಹಾಭಿಷೇಕದ ಬಳಿಕ ಜಾತ್ರಾ ಮಹೋತ್ಸವದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದು, ಸಾಯಂಕಾಲ 5 ಗಂಟೆಗೆ ಪುರದೇವರ ಹಾಗೂ ಪರಸ್ಥಳದ ವಿವಿಧ ದೇವರ ವಾಲಗ ಕೂಡುವ ಕಾರ್ಯಕ್ರಮ ಜರುಗಿ, ಮಮದಾಪುರ ಮತ್ತು ಗೋಸಬಾಳದ ಬೀರಸಿದ್ದೇಶ್ವರ ಪಲ್ಲಕ್ಕಿ, ಮುಗಳಿಹಾಳದ ಮಾಳಿಂಗರಾಯ ದೇವರ ಪಲ್ಲಕ್ಕಿ ಬರಮಾಡಿಕೊಳ್ಳುವ ಕಾರ್ಯಕ್ರಮ ಸಡಗರದಿಂದ ಜರುಗಿದವು.

ಮೇ.10ರಂದು ಬೆಳಗ್ಗೆ 6 ಗಂಟೆಗೆ ಬೀರಸಿದ್ದೇಶ್ವರ ದೇವರ ಗದ್ದುಗೆ ಮಹಾಪೂಜೆ, ಮಹಾಭಿಷೇಕ ನಡೆದು, ಮುಂಜಾನೆ 7 ಗಂಟಗೆ ಪಲ್ಲಕ್ಕಿ ಉತ್ಸವ, ಮುಂಜಾನೆ 11:30 ಗಂಟೆಗೆ ದಾನಿಗಳಿಗೆ ಸತ್ಕಾರ, ಮಹಾಪ್ರಸಾದ ನಡೆಯಿತು.

ಸುಣಧೋಳಿಯ ಅಭಿನವ ಶಿವಾನಂದ ಸ್ವಾಮಿಜಿ ಸಾನಿಧ್ಯ, ಮಮದಾಪೂರದ ಮೌನ ಮಲ್ಲಿಕಾರ್ಜುನ ಸ್ವಾಮಿಜಿ ನೇತೃತ್ವ, ಶಾಸಕ ಬಾಲಚಂದ್ರ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ ಉದ್ಘಾಟನೆ, ಕರ್ನಾಟಕ ಪ್ರದೇಶ ಕುರುಬರ ಸಂಘದ ರಾಜ್ಯಾಧ್ಯಕ್ಷ ರಾಜೇಂದ್ರ ಸಣ್ಣಕ್ಕಿ, ಗ್ರಾಪಂ ಮಾಜಿ ಅಧ್ಯಕ್ಷ ಬಸವಂತ ಕೋಣಿ ಜ್ಯೋತಿ ಪ್ರಜ್ವಲಿಸಿದ್ದಾರೆ. ಈರಯ್ಯ ಹಿರೇಮಠ, ಸಂಗಯ್ಯ ಹಿರೇಮಠ, ಮುತ್ತೆಪ್ಪ ವಡೇರ, ಹನುಮಂತ ವಡೇರ ಸಮ್ಮುಖ ವಹಿಸಲಿದ್ದಾರೆ. ಗ್ರಾಪಂ ಮಾಜಿ ಅಧ್ಯಕ್ಷೆ ಯಲ್ಲವ್ವ ಚಂದರಗಿ ಅಧ್ಯಕ್ಷತೆ, ಗ್ರಾಪಂ ಮಾಜಿ ಉಪಾಧ್ಯಕ್ಷೆ ಸಾಂವಕ್ಕಾ ಬಾಣಸಿ, ಶಿವನಪ್ಪ ಮಾಳೇದ, ಬೀರಸಿದ್ದೇಶ್ವರ ಕಮೀಟಿ ಅಧ್ಯಕ್ಷ ಸುಭಾಷ ಕರೆಣ್ಣವರ ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.



ಸ್ಥಳೀಯ ಹಾಗೂ ಸುತ್ತಲಿನ ಹಳ್ಳಿಗಳ ಗಣ್ಯರು, ಸಂತ–ಶರಣರು, ಗ್ರಾಪಂ ಹಾಲಿ ಮತ್ತು ಮಾಜಿ ಅಧ್ಯಕ್ಷರು, ಸದಸ್ಯರು, ವಿವಿಧ ಸಂಘ, ಸಂಸ್ಥೆಗಳ ಪದಾಧಿಕಾರಿಗಳು, ಸದಸ್ಯರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಅನ್ನಸಂತರ್ಪನೆ ನೆರವೇರಿಸಲಿದ್ದಾರೆ. ರಾತ್ರಿ 9:30ಗಂಟೆಗೆ ಮುತ್ತೂರು ಬೀರಲಿಂಗೇಶ್ವರ ಡೊಳ್ಳಿನ ಗಾಯನ ಸಂಘ ಮತ್ತು ಸೋಲ್ಲಾಪೂರ ಗೇನಸಿದ್ಧ ಗಾಯನ ಸಂಘದವರಿಂದ ಡೊಳ್ಳಿನ ಗಾಯನ ನಡೆಯಲಿದೆ. ಮೇ.11ರಂದು ಮುಂಜಾನೆ 8ಗಂಟೆಗೆ ಬೀರಸಿದ್ದೇಶ್ವರ ದೇವರ ಗದ್ದುಗೆ ಪೂಜೆ, ಅಭಿಷೇಕ, ಭಂಢಾರ ಒಡೆಯುವ ಕಾರ್ಯಕ್ರಮದ ಬಳಿಕ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳಲಿದೆ ಎಂದು ಸ್ಥಳೀಯ ಬೀರಸಿದ್ಧೇಶ್ವರ ಕಮೀಟಿ ಕಾರ್ಯದರ್ಶಿ ಮಾಯಪ್ಪ ಬಾಣಸಿ, ಸದಾಶಿವ ಕುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರ ಮಟ್ಟದ ಹೊನಲು–ಬೆಳಕಿನ ಕ್ರಿಕೆಟ್ ಪಂದ್ಯಾವಳಿಗಳಿಗೆ ಚಾಲನೆ

**ಬೆಳಗಾವಿ ವಾರ್ತೆ ಗೋಕಾಕ:** ರಾಹುಲ್ ಟ್ರೋಫಿ – ಸೀಜನ್ 3 ಜಿಲ್ಲಾ ಮತ್ತು ರಾಷ್ಟ್ರ ಮಟ್ಟದ ಹೊನಲು–ಬೆಳಕಿನ ಕ್ರಿಕೆಟ್ ಪಂದ್ಯಾ ವಳಿಗಳಿಗೆ ಬುಧವಾರದಂದು ನಗರದ ಮಹರ್ಷಿ ಶ್ರೀ ವಾಲ್ಮೀಕಿ ಕ್ರೀಡಾಂಗಣದಲ್ಲಿ ತಹಶೀಲ್ದಾರ ಡಾ.ಮೋಹನ ಭಸ್ಮೆ ಅವರು ಚಾಲನೆ ನೀಡಿದರು.

ದಿನಾಂಕ 6 ರಿಂದ 9ರವರೆಗೆ ಜಿಲ್ಲಾ ಮಟ್ಟದ ಮಟ್ಟದ ಪಂದ್ಯಾವಳಿಗಳು ನಡೆಯಲಿದ್ದು, ಈ ಪಂದ್ಯಾವಳಿಯಲ್ಲಿ ಒಟ್ಟು 26 ತಂಡಗಳು ಭಾಗವಹಿಸಿದ್ದು, ವಿಜೇತ ತಂಡಕ್ಕೆ ಪ್ರಥಮ ಬಹುಮಾನದ ರೂಪದಲ್ಲಿ 1 ಲಕ್ಷ ನಗದು ಮತ್ತು ಆಕರ್ಷಕ ಟ್ರೋಫಿ, ದ್ವಿತೀಯ ಬಹುಮಾನ ರೂಪದಲ್ಲಿ 50 ಸಾವಿರ ರೂ ನಗದು ಮತ್ತು ಆಕರ್ಷಕ ಟ್ರೋಫಿ ಪಡೆಯಲಿದ್ದಾರೆ.

ದಿನಾಂಕ 10 ರಿಂದ 14ರವರೆಗೆ ರಾಷ್ಟ್ರ ಮಟ್ಟದ ರಾಹುಲ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಗಳು ಜರುಗಲಿದ್ದು, ಈ ಪಂದ್ಯಾವಳಿಯಲ್ಲಿ ಗುಜರಾತ್, ಮಹಾರಾಷ್ಟ್ರ, ಗೋವಾ, ಕೇರಳ ಸೇರಿದಂತೆ ವಿವಿಧ ರಾಜ್ಯಗಳಿಂದ ಒಟ್ಟು 16 ತಂಡಗಳು ಭಾಗವಹಿಸಲ್ಲಿದ್ದು, ವಿಜೇತ ತಂಡಕ್ಕೆ ಪ್ರಥಮ ಬಹುಮಾನದ ರೂಪದಲ್ಲಿ 3 ಲಕ್ಷ ರೂ ನಗದು ,ಆಕರ್ಷಕ ಟ್ರೋಫಿ, ದ್ವಿತೀಯ ಬಹುಮಾನದ ರೂಪದಲ್ಲಿ 2 ಲಕ್ಷ ರೂ ನಗದು ಮತ್ತು ಆಕರ್ಷಕ ಟ್ರೋಫಿ ಪಡೆಯಲಿದ್ದಾರೆ. ಎರಡು ಪಂದ್ಯಾವಳಿಯಲ್ಲಿ ಪಂದ್ಯ ಪುರುಷ, ಪಂದ್ಯಶ್ರೇಷ್ಠ ಸೇರಿದಂತೆ ಅನೇಕ ವೈಯಕ್ತಿಕ ಬಹುಮಾನಗಳನ್ನು ಕೊಡಲಾಗುವುದು




ಈ ಸಂದರ್ಭದಲ್ಲಿ ಪಿಎಸ್ಐ ಕಿರಣ ಮೋಹಿತೆ, ಸಂಘಟಕ ರಿಯಾಜ ಚೌಗಲಾ, ಸಂತೋಷ ಭಟ್ಟ್, ಹನೀಫ ಶಾಬಾಶ ಖಾನ, ಮಂಜುನಾಥ್ ಗಂಗಣ್ಣವರ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅರ್ಜಿ ಅವಧಿ ವಿಸ್ತರಣೆ

ಗದಗ: 2025–26 ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಶುಲ್ಕ ಮರುಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ 16.05.2026 ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ್ ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐತಿಹಾಸಿಕ ಹಂಪಿಯಲ್ಲಿ ಶೀಘ್ರವೇ ತಲೆ ಎತ್ತಲಿದೆ ಅತ್ಯಾಧುನಿಕ 'ಸ್ಟ್ರೀಟ್ ಫುಡ್ ಹಬ್'




**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ವಿಶ್ವವಿಖ್ಯಾತ ಪ್ರವಾಸಿ ತಾಣ ಹಂಪಿಯಲ್ಲಿ ಪ್ರವಾಸಿಗರಿಗೆ ಹಾಗೂ ಸ್ಥಳೀಯರಿಗೆ ಒಂದೇ ಸೂರಿನಡಿ ತರಹೇವಾರಿ ಗುಣಮಟ್ಟದ ಆಹಾರ ಖಾದ್ಯಗಳ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ 'ಪಿ.ಎಂ. ಸ್ವನಿಧಿ' ಯೋಜನೆಯಡಿ ಅತ್ಯಾಧುನಿಕ 'ಸ್ಟ್ರೀಟ್ ಫುಡ್ ಹಬ್' ಸ್ಥಾಪಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ಪಿಎಂ ಸ್ವನಿಧಿ ಯೋಜನೆಯಡಿ ಸ್ಟ್ರೀಟ್ ಫುಡ್ ಹಬ್ ಸ್ಥಾಪನೆಗೆ ಸಂಬಂಧಿಸಿದಂತೆ ಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಂಪಿಗೆ ಬರುವ ಸಾವಿರಾರು ದೇಶಿ–ವಿದೇಶಿ ಪ್ರವಾಸಿಗರಿಗೆ ಒಂದೇ ಸೂರಿನಡಿ ಸ್ವಚ್ಛ ಹಾಗೂ ವೈವಿಧ್ಯಮಯ ಆಹಾರಗಳನ್ನು ಒದಗಿಸುವುದು ಈ ಫುಡ್ ಹಬ್‌ನ ಮುಖ್ಯ ಉದ್ದೇಶವಾಗಿದೆ. ಇದರಿಂದ ಸ್ಥಳೀಯ ಬೀದಿ ಬದಿ ವ್ಯಾಪಾರಿಗಳಿಗೂ ಆರ್ಥಿಕ ಸಬಲೀಕರಣಕ್ಕೆ ಅವಕಾಶ ಸಿಗಲಿದ್ದು, ಹಂಪಿಯ ಪ್ರವಾಸೋದ್ಯಮಕ್ಕೆ ಹೊಸ ಮೆರುಗು ಸಿಗಲಿದೆ. ಕೇಂದ್ರ ಸರ್ಕಾರದ ಪಿ.ಎಂ. ಸ್ವನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳ ಉಪ ಘಟಕದಡಿ ಈ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಅದರಂತೆ ರಾಜ್ಯದಲ್ಲಿ ಚಾಮುಂಡಿ ಬೆಟ್ಟ, ಬೇಲೂರು–ಹಳೇಬೀಡು, ಗಾಣಗಾಪುರ, ಪಟ್ಟದಕಲ್ಲು ಹಾಗೂ ಹಂಪಿ ಸೇರಿ 5 ಪ್ರದೇಶಗಳಲ್ಲಿ ಸ್ಟ್ರೀಟ್ ಫುಡ್ ಹಬ್ ಸ್ಥಾಪಿಸಲು ನಿರ್ಧರಿಸಲಾಗಿದೆ. ಅದರಲ್ಲಿ ನಮ್ಮ ಹಂಪಿಯೂ ಸೇರಿದ್ದು, ಹೆಮ್ಮೆಯ ಸಂಗತಿ. ಈ ಸ್ಟ್ರೀಟ್ ಫುಡ್ ಹಬ್ ಸ್ಥಾಪಿಸಲು ಒಂದು ಕ್ಲಸ್ಟರ್‌ಗೆ 4 ಕೋಟಿ ವೆಚ್ಚದಲ್ಲಿ ತಾತ್ಕಾಲಿಕ ಮಳಿಗೆ ಸ್ಥಾಪಿಸಿ ವ್ಯಾಪಾರ ನಡೆಸಲು ಅನುಮತಿ ನೀಡಲಾಗುವುದು. ಈ ಯೋಜನೆಯ ಅನುಷ್ಠಾನಕ್ಕಾಗಿ ಹಂಪಿ ಗ್ರಾಮ ಪಂಚಾಯಿತಿ ಹಾಗೂ ಕಮಲಾಪುರ ಪುರಸಭೆ ಜಂಟಿಯಾಗಿ ಕಾರ್ಯನಿರ್ವಹಿಸಲಿವೆ. ಈಗಾಗಲೇ ಈ ಯೋಜನೆಗಾಗಿ ಮಳಿಗೆ ಸ್ಥಾಪಿಸಲು 3 ಸ್ಥಳ ಗುರುತಿಸಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಪೈಕಿ ಈಗಾಗಲೇ ದೊಡ್ಡ ಆಲದ ಮರದ ಎದುರು ಹಾಗೂ ಹಂಪಿ ಪಾರ್ಕಿಂಗ್ ಸ್ಥಳದ ಹತ್ತಿರ ಗುತ್ತಿಲ್ಯಾಂಡ್ ಸೇರಿ ಎರಡು ಕಡೆ ಸ್ಥಳ ಸಹ ಗುರುತಿಸಲಾಗಿದ್ದು, ಭೂಮಿ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಈ ನಿಟ್ಟಿನಲ್ಲಿ ಒಂದು ಸ್ಟ್ರೀಟ್ ಫುಡ್ ಹಬ್‌ನಲ್ಲಿ 50 ಜನ ವ್ಯಾಪಾರಗಾರರಿಗೆ ಅವಕಾಶವಿದ್ದು, ದೇಶ ವಿದೇಶಗಳಿಂದ ಆಹಾರ ಹರಸಿ ಬರುವವರಿಗೆ ಶುಚಿ ಮತ್ತು ರುಚಿಯಾದ ಶುದ್ದ ಆಹಾರ ಒದಗಿಸಬೇಕು. ಜತೆಗೆ ಗ್ರಾಹಕರಿಗೆ ನೀರು, ನೆರಳು ಸೇರಿ ಅಗತ್ಯ ಮೂಲ ಸೌಕರ್ಯಗಳನ್ನೊಳಗೊಂಡಂತೆ ಮಳಿಗೆಗಳ ಸುತ್ತ ಸ್ವಚ್ಚತೆ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದರು.

ಈ ವೇಳೆ ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮನೋಹರ್, ಹಂಪಿ ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ರಮೇಶ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಜಿಲ್ಲಾ ಅಭಿಯಾನ ವ್ಯವಸ್ಥಾಪಕ ದೇವರಾಜ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಜಿಲ್ಲಾ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾಹಿತಿ

# ಅನಧಿಕೃತ ಕಲ್ಲು ಗಣಿ ಮತ್ತು ಮರಳು ಸಾಗಣೆ 16 ಪ್ರಕರಣ ದಾಖಲು 4.45 ಲಕ್ಷ ದಂಡ

**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ಜಿಲ್ಲೆಯಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ, ಮರಳು ಸಾಗಣಿ ಹಾಗೂ ಮಣ್ಣು ಸಾಗಣೆ ಸೇರಿದಂತೆ ವಿವಿಧ ರೀತಿಯ ಒಟ್ಟು 16 ಪ್ರಕರಣ ದಾಖಲಿಸಿ ರೂ.4.45 ಲಕ್ಷ ದಂಡ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾಹಿತಿ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಉಪಖನಿಜ ಕಟ್ಟಡ ಕಲ್ಲು ಅನಧಿಕೃತ ಸಾಗಾಣಿಕೆಗೆ ಸಂಬಂಧಿಸಿದಂತೆ 9 ಪ್ರಕರಣ ದಾಖಲಾಗಿದ್ದು, ರೂ. 3.9 ಲಕ್ಷ ದಂಡ ವಿಧಿಸಲಾಗಿದೆ. ಅಕ್ರಮ ಮರಳು ಸಾಗಣೆಗೆ ಸಂಬಂಧಿಸಿದ 6 ಪ್ರಕರಣ ದಾಖಲಾಗಿದ್ದು, ರೂ 1.2 ಲಕ್ಷ ದಂಡ ಮತ್ತು ಅನಧಿಕೃತ ಮಣ್ಣು ಸಾಗಣೆಗೆ ಸಂಬಂಧಿಸಿದ 1 ಪ್ರಕರಣ ಸೇರಿ ಜಿಲ್ಲೆಯಲ್ಲಿ ಒಟ್ಟು 16 ಪ್ರಕರಣಕ್ಕೆ ಒಟ್ಟು 4.45 ಲಕ್ಷ ರೂಪಾಯಿ ದಂಡ ವಸೂಲಿ ಮಾಡಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ಅನಧಿಕೃತ ಗಣಿಗಾರಿಕೆ ಮತ್ತು ಅಕ್ರಮ ಮರಳು ಮಾರಾಟ ಜಾಲವನ್ನು ಬೇರುಸಹಿತ ಕಿತ್ತೆಸೆಯಲು ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಜಿಲ್ಲೆಯ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಗಣಿಗಾರಿಕೆ ಪ್ರದೇಶಗಳಿಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ನಿರಂತರವಾಗಿ ಭೇಟಿ ನೀಡಿ ಪರಿಶೀಲಿಸಬೇಕು. ನಿಗದಿಪಡಿಸಿದ ಮಿತಿಗಿಂತ ಹೆಚ್ಚಿನ ಗಣಿಗಾರಿಕೆ, ಮರಳು ಸಾಗಾಟ ನಡೆಸುತ್ತಿರುವುದು ಕಂಡುಬಂದಲ್ಲಿ ಅಂತಹ ಪರವಾನಗಿಗಳನ್ನು ತಕ್ಷಣವೇ ರದ್ದುಗೊಳಿಸುವುದರ ಜೊತೆಗೆ ಭಾರೀ ದಂಡ ವಿಧಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ನದಿ ಪಾತ್ರಗಳಲ್ಲಿ ಹಾಗೂ ಹಳ್ಳ–ಕೊಳ್ಳಗಳಲ್ಲಿ ರಾಜಾರೋಷವಾಗಿ ನಡೆಯುತ್ತಿರುವ ಮರಳು ದಂಧೆಯನ್ನು ತಡೆಯಲು ಪೊಲೀಸ್ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಕಾರ್ಯಾಚರಣೆ ನಡೆಸಬೇಕು. ಅಕ್ರಮವಾಗಿ ಮರಳು ಸಾಗಿಸುವ ವಾಹನಗಳನ್ನು ವಶಪಡಿಸಿಕೊಂಡು, ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು ಎಂದರು. ಸರ್ಕಾರದ ನೂತನ ಮರಳು ನೀತಿಯನ್ವಯ ಸಾರ್ವಜನಿಕರಿಗೆ ಮತ್ತು ಸರ್ಕಾರಿ ಕಾಮಗಾರಿಗಳಿಗೆ ಸಕಾಲದಲ್ಲಿ ಮರಳು ಲಭ್ಯವಾಗುವಂತೆ ನೋಡಿಕೊಳ್ಳಬೇಕು. ಮರಳು ವಿತರಣಾ ಕೇಂದ್ರಗಳಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಮಧ್ಯವರ್ತಿಗಳ ಹಾವಳಿಯನ್ನು ಸಂಪೂರ್ಣವಾಗಿ ನಿಯಂತ್ರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಗಡಿಭಾಗದ ಚೆಕ್ ಪೋಸ್ಟ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, 24/7 ನಿಗಾ ಇರಿಸಬೇಕು. ರಾತ್ರಿ ವೇಳೆ ನಡೆಯುವ ಅಕ್ರಮ ಗಣಿ ಮತ್ತು ಮರಳು ಸಾಗಾಣಿ ತಡೆಯಲು ರಾತ್ರಿ ಗಸ್ತು ಪಡೆಯನ್ನು ಬಲಪಡಿಸಲು ಪೊಲೀಸ್ ಇಲಾಖೆಗೆ ಸೂಚನೆ ನೀಡಿದ ಅವರು, ಪರಿಸರ ಸಮತೋಲನ ಕಾಯ್ದುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ನೈಸರ್ಗಿಕ ಸಂಪನ್ಮೂಲಗಳ ಲೂಟಿಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಖಡಕ್ ಎಚ್ಚರಿಕೆ ನೀಡಿದರು.

ಹೊಸದಾಗಿ ಗುರುತಿಸಲಾದ ಮರಳು ಬ್ಲಾಕ್‌ಗಳಲ್ಲಿ ಗಣಿಗಾರಿಕೆ ಪ್ರಾರಂಭಿಸುವ ಮುನ್ನ ರಾಜ್ಯ ಪರಿಸರ ಪರಿಣಾಮ ಅಂದಾಜು ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು.

2018 –19ನೇ ಸಾಲಿನಲ್ಲಿ ಹೂವಿನಹಡಗಲಿ ತಾಲ್ಲೂಕಿನ ಹಕ್ಕುಂಡಿ ಗ್ರಾಮ ವ್ಯಾಪ್ತಿಯಲ್ಲಿ ಮರಳು ಪರವಾನಗಿ ನೀಡಲಾಗಿದೆ. ಅದರಂತೆ 30746.08 ಮೆಟ್ರಿಕ್ ಟನ್ ಮರಳು ದಾಸ್ತಾನಿದ್ದು, ಅದರಲ್ಲಿ ಕೇವಲ 2 ಸಾವಿರ ಮೆಟ್ರಿಕ್ ಟನ್ ಮರಳು ಬಳಸಲಾಗಿದೆ. ಉಳಿದಂತೆ 30546 ಮೆಟ್ರಿಕ್ ಟನ್ ಮರಳು ಜಲ್ಲಿ ಕಲ್ಲು ಹೆಚ್ಚಾಗಿ ಕಂಡು ಬರುತ್ತಿದ್ದು ಬಳಕೆಗೆ ಯೋಗ್ಯವಲ್ಲ ಎಂಬ ಕಾರಣದಿಂದ ಹಾಗೆ ಉಳಿಸಲಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಜಂಟಿಯಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ನೀಡಲು ಸೂಚನೆ ನೀಡಿದರು. ಸಾಗಾಣಿಕೆ ವೇಳೆ ಮರಳು ಮತ್ತು ಕಲ್ಲುಗಳು ಪುನಃ ಮಿಶ್ರಣವಾಗದಂತೆ ಎಚ್ಚರಿಕೆ ವಹಿಸಬೇಕು ಮತ್ತು ರಾಯಲ್ಟಿ ಪಾವತಿಸಿದ ನಂತರವಷ್ಟೇ ವಿಲೇವಾರಿಗೆ ಅವಕಾಶ ನೀಡಬೇಕು ಎಂದು ತಾಕೀತು ಮಾಡಿದರು.

ಕೂಡ್ಲಿಗಿ ತಾಲ್ಲೂಕಿನ ಹಾಲಸಾಗರ ಗ್ರಾಮದ ಕೈಲಾಶ್ ಸ್ಟೋನ್ ಕ್ರಷರ್ ಘಟಕದ ಪರವಾನಗಿ ಮುಕ್ತಾಯವಾಗಿದ್ದು, ನವೀಕರಣಕ್ಕಾಗಿ ಅರ್ಜಿ ಸಲ್ಲಿಸಲಾಗಿದೆ. ಹಾಗೆಯೇ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ವರದಾಪುರ ಗ್ರಾಮದಲ್ಲಿ ಹೊಸದಾಗಿ ಸ್ಟೋನ್ ಕ್ರಷರ್ ಸ್ಥಾಪಿಸಲು ಸಲ್ಲಿಕೆಯಾಗಿದೆ ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪನಿರ್ದೇಶಕ ರಿಯಾಜ್ ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಆಯಾ ಪ್ರದೇಶಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಜಂಟಿಯಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ನಿಯಮಾನುಸಾರ ಅನುಮತಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.




ಪ್ರಸ್ತುತ ಬಿರು ಬೇಸಿಗೆ ಇರುವ ಕಾರಣ ಮಕ್ಕಳು ಕೆರೆ, ಬಾವಿಗಳಿಗೆ ಈಜಲು ಹೋಗಿ ಸಾಕಷ್ಟು ಸಾವು ನೋವು ಸಂಭವಿಸುತ್ತಿವೆ. ಆದ್ದರಿಂದ ಇದಕ್ಕೆ ಕಡಿವಾಣ ಹಾಕಲು ಆಯಾಕಟ್ಟಿನ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಸೂಚನಾ ಫಲಕ ಅಳವಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದಕ್ಕೆ ಅವರು ಸಕರಾತ್ಮಕವಾಗಿ ಸ್ಪಂದಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ ಇ ಓ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ, ಅರಣ್ಯ ಇಲಾಖೆ ಉಪಸಂರಕ್ಷಣಾಧಿಕಾರಿ ಅನುಪಮ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪನಿರ್ದೇಶಕ ರಿಯಾಜ್, ಪ್ರಾದೇಶಿಕ ಸಾರಿಗೆ ಅಧಿಕಾರಿ ದಾಮೋದರ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಹೇಮರಾಜ್ ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೇ 19 ರಂದು ಪ್ರಗತಿ ಪರಿಶೀಲನಾ ಸಭೆ

ವಿಜಯನಗರ (ಹೊಸಪೇಟೆ): ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಆಯೋಗದ ಅಧ್ಯಕ್ಷರು ಇದೇ ಮೇ 19 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಅಂದು ಬೆಳಗ್ಗೆ 11ಕ್ಕೆ ಅವರ ಅಧ್ಯಕ್ಷತೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ಯೋಜನೆಗಳಡಿ ಇಲಾಖೆಗಳಿಗೆ ನೀಡಲಾಗಿರುವ ಅನುದಾನದ ಸಮರ್ಪಕ ವಿತರಣೆ, ವಿಳಂಬ ಹಾಗೂ ಕುಂದು ಕೊರತೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ. ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ. ಎ. ಕಾಳೆ ತಿಳಿಸಿದ್ದಾರೆ.

## ರೈಲ್ವೆ ಹೋರಾಟಗಾರರಿಗೆ ವಿಕಾಸ ವೇದಿಕೆಯಿಂದ ಸನ್ಮಾನ

# ಗದಗ-ಹರಪನಹಳ್ಳಿ ರೈಲು ಮಾರ್ಗವಾಗಲಿ: ಬಸವರಾಜ ನವಲಗುಂದ



**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲೆ ಸೇರಿ ಉತ್ತರ ಕರ್ನಾಟಕ ಭಾಗದ ಜನತೆಗೆ ವ್ಯಾಪಾರ, ಶಿಕ್ಷಣ, ಆರೋಗ್ಯ ಮುಂತಾದ ಹಲವಾರು ಕೆಲಸ ಕಾರ್ಯಗಳಿಗೆ ಅನುಕೂಲತೆ ಕಲ್ಪಿಸುವ ಗದಗ-ಹರಪನಹಳ್ಳಿ ರೈಲು ಮಾರ್ಗ ಬೇಗನ ಕೈಗೂಡಲಿ ಎಂದು ಗದಗ- ಹರಪನಹಳ್ಳಿ ಮಾರ್ಗದ ರೈಲ್ವೆ ಹೋರಾಟ ಸಮಿತಿ ಸಂಸ್ಥಾಪಕರ ಬಸವರಾಜ ನವಲಗುಂದ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಗದಗ ಜಿಲ್ಲಾ ವಿಕಾಸ ವೇದಿಕೆಯಿಂದ ಗದಗ- ಹರಪನಹಳ್ಳಿ ಮಾರ್ಗದ ರೈಲ್ವೆ ಹೋರಾಟ ಸಮಿತಿ ಸಂಸ್ಥಾಪಕ ಬಸವರಾಜ ನವಲಗುಂದ ಸೇರಿ ಸಮಿತಿ ಸದಸ್ಯರಿಗೆ ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಸನ್ಮಾನಿತಗೊಂಡು ಅವರು ಮಾತನಾಡಿದರು.

ಗದಗ - ಹರಪನಹಳ್ಳಿ ಮಾರ್ಗದ ಸಲುವಾಗಿ ನಾವು ದೆಹಲಿ, ಬೆಂಗಳೂರು, ಹುಬ್ಬಳ್ಳಿ ಮುಂತಾದ ಹಲವಾರು ರೈಲ್ವೆ ಇಲಾಖೆ ಹಾಗೂ ರೈಲ್ವೆ ಸಚಿವರಿಗೆ ಮನವಿ, ಪ್ರತಿಭಟನೆಗಳ ಮೂಲಕ ಗಮನ ಸೆಳೆದಿದ್ದೇವೆ. ಈ ಮಾರ್ಗದ ಸರ್ವೆ ಕಾರ್ಯಕ್ಕೆ ಈಗಾಗಲೇ ಕೇಂದ್ರ ಸರ್ಕಾರ 9 ಲಕ್ಷ ರೂಪಾಯಿ ಮೀಸಲು ಇಟ್ಟಿರುವುದು ಈ ಮಾರ್ಗದಲ್ಲಿ ರೈಲ್ವೆ ಆದಷ್ಟು ಬೇಗ ಓಡಾಡುವ ಭರವಸೆಯನ್ನು ಹೆಚ್ಚಿಸಿದೆ. ಸರ್ವೆ ಕಾರ್ಯ ಶೀಘ್ರ ಮುಗಿದು, ಈ ಮಾರ್ಗದಲ್ಲಿ ಜಿಲ್ಲೆಯ ಜನ ರೈಲಿನಲ್ಲಿ ಓಡಾಡುವಂತಾಗಲಿ ಎಂದು ಆಶಿಸಿದರು.

ಹೋರಾಟ ಸಮಿತಿ ಸದಸ್ಯರಿಗೆ ಸನ್ಮಾನಿಸಿದ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಅವರು ಮಾತನಾಡಿ, ಗದಗ - ಹರಪನಹಳ್ಳಿ ನೂತನ ಮಾರ್ಗವು ಬೇಗನೆ ಜನರಿಗೆ ನೀಡಲು ಹರಪನಹಳ್ಳಿ ಶಾಸಕರು ಶ್ರೀಮತಿ ಲತಾ ಮಲ್ಲಿಕಾರ್ಜುನ ಸೇರಿ ಗದಗ ಉಸ್ತುವಾರಿ ಸಚಿವರಾದ ಹೆಚ್.ಕೆ ಪಾಟೀಲರು, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಜಿಲ್ಲಾಧಿಕಾರಿಗಳು, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ ಸಂಕನೂರ ಅವರಿಗೆ ಅಷ್ಟೇ ಅಲ್ಲ, ವಿಜಯನಗರ ಜಿಲ್ಲೆಯ ಜಿಲ್ಲಾಧಿಕಾರಿಗಳ ಜೊತೆಗೆ ಬಳ್ಳಾರಿ ಲೋಕಸಭಾ ಸದಸ್ಯರು ಆಗಿರುವ ಈ. ತುಕಾರಾಂ ಇವರಿಗೆ ಮನವಿ ಪತ್ರ ನೀಡಲಾಗಿದೆ.

ಈಗಾಗಲೇ ಈ ಬಗ್ಗೆ ಗದಗ ಹಾಗೂ ವಿಜಯನಗರ ಜಿಲ್ಲೆಯ ಎಲ್ಲಾ ಜನ ಪ್ರತಿನಿಧಿಗಳ ಗಮನಕ್ಕೆ ಸಹ ಬಂದಿದ್ದು, ಈ ರೈಲು ಮಾರ್ಗದಿಂದ ಎರಡೂ ಜಿಲ್ಲೆಯ ಜನರಿಗೆ ಬಹಳಷ್ಟು ಅನುಕೂಲತೆ ಇದೆ. ಈ ಮಾರ್ಗ ಬೇಗನೇ ಪೂರ್ಣಗೊಂಡರೆ ಬಾಗಲಕೋಟೆ, ವಿಜಯಪುರ ಜಿಲ್ಲೆಯ ಜನರಿಗೆ ಸಹ ಬೆಂಗಳೂರು, ಅಲ್ಲಿಂದ ಮುಂದಿನ ಪ್ರಯಾಣಕ್ಕೆ ಅನುಕೂಲ ಆಗಲಿದೆ.

ಅಷ್ಟೇ ಅಲ್ಲ, ಈ ರೈಲು ಮಾರ್ಗದಿಂದ ಗದಗ ಜಂಕ್ಷನ್‌ಗೆ ಮಹತ್ವ ಬರಲಿದೆ. ಜೊತೆಗೆ ಇಲ್ಲಿನ ಜನರಿಗೆ ಉದ್ಯೋಗ ವ್ಯಾಪಾರ ಬೆಳವಣಿಗೆಗೆ ಸಹಕಾರ ಆಗಲಿದೆ. ದಯಮಾಡಿ ಜಿಲ್ಲೆಯ ಜನರು ನಾವು ಹೋರಾಟ ಮಾಡುವ ಸಂದರ್ಭದಲ್ಲಿ ಸ್ಪಂದಿಸಲು ವಿಶ್ವನಾಥ ಖಾನಾಪೂರ ಅವರು ಮನವಿ ಮಾಡಿದರು

ನಗರಸಭೆ ಮಾಜಿ ಸದಸ್ಯರಾದ ಮಂಜುನಾಥ ಹೇಮಣ್ಣ ಮುಳಗುಂದ ಅವರು ಮಾತನಾಡಿ, ಜಿಲ್ಲೆಯ ವ್ಯಾಪಾರ ವಹಿವಾಟಿಗೆ ಈ ಮಾರ್ಗದಿಂದ ಗದಗ ಜಿಲ್ಲೆಯು ಅಭಿವೃದ್ಧಿ ಹೊಂದಲು ಅನುಕೂಲ ಆಗಲಿದೆ. ನಾವು ಸಹ ನಿಮ್ಮ ಹೋರಾಟದಲ್ಲಿ ಸದಾಕಾಲವೂ ಇರುತ್ತೇವೆ ಎಂದು ತಿಳಿಸಿದರು.

ನಗರಸಭೆಯ ಇನ್ನೋರ್ವ ಮಾಜಿ ಸದಸ್ಯರಾದ ಎಂ ಎಸ್ ಪರ್ವತಗೌಡ ಅವರು ಮಾತನಾಡಿ, ಈ ಹೊಸ ರೈಲು ಮಾರ್ಗಕ್ಕೆ ಭೂಮಿ ಸ್ವಾಧೀನ ಪ್ರಕ್ರಿಯೆ ಹಾಗೂ ಸರ್ವೆ ಕಾರ್ಯ ಬೇಗನೆ ಮುಗಿಯಲಿ. ಜೊತೆಗೆ ಮಾರ್ಗದಲ್ಲಿ ಬರುವ ನಿಲ್ದಾಣಗಳು ಆಯಾ ಊರು ಅಥವಾ ಪಟ್ಟಣಕ್ಕೆ ತೆರಳುವ ಪ್ರಯಾಣಿಕರಿಗೆ ಅನುಕೂಲ ಆಗುವಂತಿರಲಿ ಎಂದರು.

ಸಮಾರಂಭದಲ್ಲಿ ಚನ್ನಕೇಶವ ಹಿರೇಮಠ, ರಜಾಕ್ ನೂರಬಾಷಾ, ಶಿವರಾಚಯ್ಯ ಹೊಸಳ್ಳಿಮಠ, ಶಿವಮೂರ್ತಯ್ಯ ಪುರಾಣಿಕಮಠ, ರವಿಗೌಡ ಎಂ. ಪಾಟೀಲ, ರಫೀಕ್ ಕಿತ್ತೂರು, ರಮೇಶ್ ಮಡಿವಾಳರ, ಅರವಿಂದ ಕಾಂಬಳೆ, ಪ್ರಹ್ಲಾದ ಮಾಂಡ್ರೆ, ವೆಂಕಟೇಶ ಕಬಾಡಿ, ಸುರೇಶ ಪವಾರ, ಪ್ರಕಾಶ್ ನಾಯರ್, ಪವನ ಜೈನ್, ಚಂಚಲಿ ಗ್ರಾಮದ ಹಿರಿಯರಾದ ಹುಚ್ಚಪ್ಪ ಸಂದಕದ ಸೇರಿ ಮುಂತಾದವರು ಪಾಲ್ಗೊಂಡಿದ್ದರು.

# ನಾಲತವಾಡದಲ್ಲಿ ಸಿಸಿಟಿವಿ ಕ್ಯಾಮರಾ ಮರು ಅಳವಡಿಕೆಗೆ ಆಗ್ರಹ: ಯುವ ಜನ ಸೇನೆಯಿಂದ ಪೊಲೀಸ್ ಇಲಾಖೆಗೆ ಮನವಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಪಟ್ಟಣದ ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ನಾಲತವಾಡ ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸ್ಥಗಿತಗೊಂಡಿರುವ ಸಿಸಿಟಿವಿ ಕ್ಯಾಮರಾಗಳನ್ನು ಕೂಡಲೇ ಮರು ಅಳವಡಿಸಬೇಕು ಎಂದು ಒತ್ತಾಯಿಸಿ ಯುವ ಜನ ಸೇನೆ (ರಿ) ಸಂಘಟನೆಯ ಪದಾಧಿಕಾರಿಗಳು ಮುದ್ದೇಬಿಹಾಳ ಪೊಲೀಸ್ ಉಪನಿರೀಕ್ಷಕರಾದ ಸಂಜಯ ತಿಪ್ಪಾರಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ನಾಲತವಾಡವು ವಾಣಿಜ್ಯ, ಶಿಕ್ಷಣ ಹಾಗೂ ವ್ಯಾಪಾರ ವಹಿವಾಟಿನ ಪ್ರಮುಖ ಕೇಂದ್ರವಾಗಿದ್ದು, ಇಲ್ಲಿಗೆ ನೆರೆಯ ಜಿಲ್ಲೆಗಳಾದ ಯಾದಗಿರಿ, ರಾಯಚೂರು ಸೇರಿದಂತೆ ವಿವಿಧ ಭಾಗಗಳಿಂದ ನಿತ್ಯ ಸಾವಿರಾರು ಜನರು ಆಗಮಿಸುತ್ತಾರೆ. ಈ ಹಿಂದೆ ಪೊಲೀಸ್ ಇಲಾಖೆ ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿತ್ತು. ಆದರೆ, ಕಳೆದ ವರ್ಷ ದುರಸ್ತಿಗಾಗಿ ತೆರವುಗೊಳಿಸಲಾದ ಈ ಕ್ಯಾಮರಾಗಳನ್ನು ಇದುವರೆಗೂ ಮರು ಅಳವಡಿಸಿಲ್ಲ ಎಂದು ಮನವಿಯಲ್ಲಿ ಅಸಮಾಧಾನ ವ್ಯಕ್ತಪಡಿಸಲಾಗಿದೆ.

ವಿಶೇಷವಾಗಿ ಸೋಮವಾರ ನಡೆಯುವ ಸಂತೆ ದಿನದಂದು ಪಟ್ಟಣದಲ್ಲಿ ಜನಸಂದಣಿ ಹೆಚ್ಚಿರುತ್ತದೆ. ಸಿಸಿಟಿವಿ ವ್ಯವಸ್ಥೆ ಇಲ್ಲದಿರುವುದನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಕಿಡಿಗೇಡಿಗಳಿಂದ ಕಳ್ಳತನ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿವೆ. ಇದರಿಂದ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಕೂಡಲೇ ಇದಕ್ಕೆ ಕಡಿವಾಣ ಹಾಕಬೇಕಿದೆ.

ಸಾರ್ವಜನಿಕರ ಆಸ್ತಿಪಾಸ್ತಿ ರಕ್ಷಣೆ ಹಾಗೂ ಪಟ್ಟಣದ ಸುರಕ್ಷತೆಯ ಹಿತದೃಷ್ಟಿಯಿಂದ ಕೂಡಲೇ ವಿಳಂಬ ಮಾಡದೆ ಪ್ರಮುಖ ಸ್ಥಳಗಳಲ್ಲಿ ಅತ್ಯಾಧುನಿಕ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲು ಇಲಾಖೆ ಮುಂದಾಗಬೇಕು ಎಂದು ಯುವ ಜನ ಸೇನೆಯ ರಾಜ್ಯ ಘಟಕದ ಅಧ್ಯಕ್ಷರಾದ ಶಿವಾನಂದ ವಾಲಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಯುವ ಜನ ಸೇನೆಯ ರಾಜ್ಯ ಉಪಾಧ್ಯಕ್ಷ ಬಸನಗೌಡ ಎಸ್. ಪಾಟೀಲ, ಪ್ರಧಾನ ಕಾರ್ಯದರ್ಶಿ ಮಾಳಿಂಗರಾಯ ವನಹಳ್ಳಿ, ಸಂಘಟನಾ ಕಾರ್ಯದರ್ಶಿ ಶಿವಾನಂದ ಪೂಜಾರಿ, ಹಾಗೂ ಪ್ರಮುಖರಾದ ರವಿ ಕೆ.ಎಚ್., ಸಿದ್ದು ಹಾದಿಮನಿ, ಸೋಮನಗೌಡ ಬೆಳ್ಳಿ ಸೇರಿದಂತೆ ಸಂಘಟನೆಯ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮನವಿ ಸ್ವೀಕರಿಸಿದ ಪಿಎಸ್‌ಐ ಸಂಜಯ ತಿಪ್ಪಾರಡ್ಡಿ ಅವರು, ಈ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

# ಗ್ರಾಹಕರ ಸೇವೆಯೆ ನಮ್ಮ ಮೊದಲ ಆದ್ಯತೆ: ಸೈಯದ್ ಅಜೀಮ್‌ಪೀರ್

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಇಂಧನ ಸಚಿವರಾದ ಕೆ.ಜೆ ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಹೆಸ್ಕಾಂ, 2024-25ರ ಸಾಲಿನಲ್ಲಿ 153.46 ಕೋಟಿ ರೂ. ಉಳಿತಾಯ ಮಾಡಿದ್ದು, ಈ ಹಣವನ್ನು ಗ್ರಾಹಕರಿಗೆ ಮರು ಪಾವತಿಸುತ್ತಿದ್ದೇವೆ ಎಂದು ಹೆಸ್ಕಾಂ ಅಧ್ಯಕ್ಷರಾದ ಸೈಯದ್ ಅಜೀಮ್‌ಪೀರ್ ಎಸ್. ಖಾದ್ರಿ ಅವರು ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ವಿದ್ಯುತ್ ಖರೀದಿ, ಪೂರೈಕೆಯನ್ನು ಉತ್ತಮವಾಗಿ ನಿರ್ವಹಿಸಿದ ಪರಿಣಾಮ 2024-2025ರಲ್ಲಿ ಹೆಸ್ಕಾಂ 153.46 ಕೋಟಿ ರೂ. ಉಳಿತಾಯ ಮಾಡಿದೆ. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಕೆಇಆರ್‌ಸಿ) ಆದೇಶದ ಅನ್ವಯ 2024-25 ನೇ ಆರ್ಥಿಕ ವರ್ಷದ ಪ್ರತಿಯೊಬ್ಬ ಗ್ರಾಹಕರಿಗೆ ಮಾತ್ರ 2024-25ನೇ ಸಾಲಿನ ಅವಧಿಯಲ್ಲಿ ಅವರ ನಿಜವಾದ ಬಳಕೆಯನ್ನು ಆಧರಿಸಿ ಪ್ರತಿ ಯೂನಿಟ್‌ಗೆ 10 ಪೈಸೆಯಂತೆ 2026-2027ರಲ್ಲಿ ಪ್ರತಿ ತಿಂಗಳು ಸಮಾನ ಕಂತುಗಳಲ್ಲಿ (12 ಕಂತುಗಳು) ಮರು ಪಾವತಿಸಲಾಗುತ್ತದೆ. ಈ ಮೊತ್ತವನ್ನು ವಿದ್ಯುತ್ ಬಿಲ್‌ನಲ್ಲಿ ಆರ್ಥಿಕ ವರ್ಷ (FY) 25 ಟ್ರೂ ಅಪ್ ಶುಲ್ಕ ಎಂದು ಪ್ರತ್ಯೇಕವಾಗಿ ನಮೂದಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ ಸದಾ ರೈತರ ಪರ ಕೆಲಸ ಮಾಡುತ್ತಿದೆ. ರೈತರಿಗೆ ಹಗಲು ಹೊತ್ತಿನಲ್ಲಿಯೇ ಏಳು ಗಂಟೆಗಳ ಕಾಲ ವಿದ್ಯುತ್ ನೀಡುವ ನಿಟ್ಟಿನಲ್ಲಿ ಕುಸುಮ್ ಬಿ ಹಾಗೂ ಕುಸುಮ್ ಸಿ ಯೋಜನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಗ್ರಾಹಕರಿಗೆ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಯಶಸ್ವಿಯಾಗಿದೆ. ಮುಖ್ಯಮಂತ್ರಿಗಳ ಹಾಗೂ ಇಂಧನ ಸಚಿವರ ಸಹಕಾರದೊ ಂದಿಗೆ ಹೆಸ್ಕಾಂ ಜನಪರವಾಗಿ ಕೆಲಸ ಮಾಡುತ್ತಿದೆ. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು ನವೀಕೃತ ಶೀಘ್ರ ಸಂಪರ್ಕ ಯೋಜನೆಯನ್ನೂ ಜಾರಿಗೆ ತರಲಾಗಿದೆ ಎಂದು ಅವರು ತಿಳಿಸಿದ್ದಾರೆ.



# ಕನ್ನಡ ನಾಡು, ನುಡಿ, ಸಂಸ್ಕೃತಿಯನ್ನು ನಾವೆಲ್ಲರೂ ಗೌರವಿಸಬೇಕು: ಬಾಳೇಶ ಫಕಿರಪ್ಪನವರ



**ಬೆಳಗಾವಿ ವಾರ್ತೆ ಗೋಕಾಕ:** ಕನ್ನಡ ನಾಡು, ನುಡಿ,ಸಂಸ್ಕೃತಿಯನ್ನು ನಾವೆಲ್ಲರೂ ಗೌರವಿಸಬೇಕು ಎಂದು ಗೋಸಬಾಳಿನ ಸರಕಾರಿ ಶಾಲೆಯ ಶಿಕ್ಷಕ ಬಾಳೇಶ ಫಕಿರಪ್ಪನವರ ಹೇಳಿದರು.

ಮಂಗಳವಾರದಂದು ನಗರದ ಬಸವ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಗೋಕಾಕ ತಾಲೂಕು ಘಟಕದವರು ಹಮ್ಮಿಕೊಂಡ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

2ಸಾವಿರ ವರ್ಷದ ಇತಿಹಾಸ ಇರುವ ಕನ್ನಡ ನಾಡಿನಲ್ಲಿ ಹುಟ್ಟಿದ ನಾವೇ ಪುಣ್ಯವಂತರು.ಕನ್ನಡ ನಾಡ ನುಡಿಯಾಗಿದೆ. ನಾವೆಲ್ಲರೂ ಕನ್ನಡ ಭಾಷೆಯನ್ನು ಬಳಸಬೇಕು. ವಚನಕಾರರು ಕನ್ನಡ ಸಾಹಿತ್ಯವನ್ನು ಬೆಳೆಸಿದರು. ಇಂದಿನ ಮಕ್ಕಳು ಹಾಗೂ ಯುವ ಪಿಳಿಗೆಯಲ್ಲಿ ಕನ್ನಡಾಭಿಮಾನವನ್ನು ಬೆಳೆಸಬೇಕಾಗಿದೆ. ನಾವೆಲ್ಲರೂ ಒಗ್ಗಟ್ಟಾಗಿ ಕನ್ನಡ ನಾಡಿನ ಸಾಂಸ್ಕೃತಿಕ ಹಾಗೂ ಭಾಷೆಯನ್ನು ಶ್ರೀಮಂತ ಗೊಳಿಸೋಣ ಎಂದು ಹೇಳಿದರು.

ವೇದಿಕೆಯಲ್ಲಿ ಕಸಾಪ ತಾಲೂಕು ಅಧ್ಯಕ್ಷೆ ಶ್ರೀಮತಿ ಭಾರತಿ ಮದಭಾವಿ, ನಿಕಟಪೂರ್ವ ಅಧ್ಯಕ್ಷ ಮಹಾಂತೇಶ ತಾವಂಶಿ, ಸಾಹಿತಿ ಚಂದ್ರಶೇಖರ್ ಅಕ್ಕಿ ಇದ್ದರು.

## ಸಭಾ ಭವನ, ಭೋಜನ ಶಾಲೆ ಹಾಗೂ ಯಾತ್ರಿ ನಿವಾಸದ ಉದ್ಘಾಟನೆ

# ಎಲ್ಲಿ ಭಕ್ತಿ ಇದೆಯೋ, ಅಲ್ಲಿ ಶಕ್ತಿ ಇದೆ: ಸ್ವಸ್ತಿಶ್ರೀ ಭಾನುಕೀರ್ತಿ ಭಟ್ಟಾರಕ



**ಬೆಳಗಾವಿ ವಾರ್ತೆಮೋಳೆ;-** ವ್ಯಕ್ತಿಗಿಂತ ವ್ಯಕ್ತಿತ್ವ ಮುಖ್ಯ. ಸಂಪತ್ತಿಗಿಂತ ಸತ್ಯ ಮುಖ್ಯ ಇಂಥಹ ಸದ್ಗುಣಗಳನ್ನು ಹೊಂದಿರುವ ಯುವಕರನ್ನು ನಿರ್ಮಾಣ ಮಾಡುವ ಗುರುತರ ಜವಾಬ್ದಾರಿ ಪ್ರತಿಯೊಬ್ಬ ಸಾಧುಸಂತರು, ರಾಜಕಾರಣಿಗಳು, ಸಮಾಜ ಸೇವಕರ ಮೇಲಿದೆ. ಆ ಜವಾಬ್ದಾರಿಯನ್ನು ಅರಿತು ಕಾರ್ಯ ಮಾಡಿದಲ್ಲಿ ಸಮೃದ್ಧವಾದ ದೇಶ ನಿರ್ಮಾಣವಾಗಲು ಸಾಧ್ಯ ಅಂಥ ಕಾರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ಕಂಬದಳ್ಳಿ ಜೈನ ಮಠದ ಸ್ವಸ್ತಿಶ್ರೀ ಭಾನುಕೀರ್ತಿ ಭಟ್ಟಾರಕ ಮಹಾಸ್ವಾಮಿಗಳು ಧಿವ್ಯ ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ಅವರು ಕಾಗವಾಡ ತಾಲೂಕಿನ ಸುಕ್ಷೇತ್ರ ಉಗಾರ ಬುದ್ರುಕ್ ಗ್ರಾಮದ ಶ್ರೀ ಪದ್ಮಾವತಿ ದೇವಿ ಮಂದಿರದಲ್ಲಿ ನೂತನವಾಗಿ ನಿರ್ಮಿಸಿದ ಸಭಾ ಭವನ, ಭೋಜನ ಶಾಲೆ, ಹಾಗೂ ಯಾತ್ರಿ ನಿವಾಸವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.ಪಾಲಕರು ತಮ್ಮ ಮಕ್ಕಳಿಗೆ ಯಾವುದೇ ಭಾಷೆಯ ಶಿಕ್ಷಣ ಕೊಡಿಸಿದರೂ ಕೂಡ ಜೈನ ಧರ್ಮದ ಆಚಾರ, ವಿಚಾರಗಳನ್ನು ಪ್ರತಿದಿನ ಮಕ್ಕಳಿಗೆ ಬೋಧಿಸುವುದ ಜೊತೆಗೆ ತಾವೂ ಕೂಡ ಅಹಿಂಸಾ ಪರಮೋಧರ್ಮದ ತತ್ವಶಿದ್ದಾಂತ ಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕೆಂದ ಅವರು ತಾವೆಲ್ಲರು ಭಕ್ತಿ ಮಾರ್ಗದಲ್ಲಿ ನಡೆಯಿರಿ, ಆ ತಾಯಿ ಪದ್ಮಾವತಿ ನಿಮಗೆ ನಿಮ್ಗೆ ಆಶೀರ್ವಧಿಸು ತ್ತಾಳೆ. ಯಾರ ಬಳಿ ಭಕ್ತಿ ಇದೇಯೋ ಅಲ್ಲಿ ಶಕ್ತಿ ಇದೆ ಎಂದರು.

ಪ.ಪೂ.ಜಗದುರು ಅಕಲಂಕಕೇಸರಿ ಸ್ವಸ್ತಿಶ್ರೀ ಭಟ್ಟಾಕಲಂಕ ಪಟ್ಟಾಚಾರ್ಯಮಹಾ ಸ್ವಾಮಿಗಳು ಮಾತನಾಡುತ್ತ ಭಕ್ತಿಯಿಂದಶಕ್ತಿ, ಶಕ್ತಿಯಿಂದ ಯುಕ್ತಿ, ಸಂಪಾದಿಸಿದರೆ ಪದ್ಮಾವತಿ ದೇವಿ ತಮಗೆ ಖಂಡಿತವಾಗಿ ಯೂ ಒಲೆದು ತಮಗೆ ಬಂದಂತಾ ಕಷ್ಟಗಳ ನ್ನು ದೂರವಾಡುವ ಶಕ್ತಿ ಆ ತಾಯಿಗಿದೆ ಎಂದರು.ರಾಜ್ಯಸ್ಥಾನದ ತಿಜಾರಾ ಜೈನ ಮಠದ ಸ್ವಸ್ತಿಶ್ರೀ ಸೌರಭಸೇನ ಭಟ್ಟಾರಕ ಪಟ್ಟಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಬೆಳಗಾವಿ ದಕ್ಷಿಣ ಕ್ಷೇತ್ರದ ಶಾಸಕ ಅಭಯ ಪಾಟೀಲ ಮಾತನಾಡಿ ಕರ್ನಾಟಕ ಹಾಗೂ ಮಹಾರಾಷ್ಟ್ರದಲ್ಲಿ ಪ್ರಸಿದ್ಧಿ ಹೊಂದಿ ರುವ ಉಗಾರ ಶ್ರೀ ಪದ್ಮಾವತಿ ದೇವಿಯ ದೇವಸ್ಥಾನ ಜಾಗೃತ ದೇವಸ್ಥಾನವಾಗಿದ್ದು, ಇಲ್ಲಿ ಬಂದು ಹೋಗುವ ಶ್ರಾವಕ, ಶ್ರಾವಕಿಯರಿಗೆ ಅನುಕೂಲವಾಗಲಿ ಎಂಬ ದೃಷ್ಟಿಯಿಂದ ಯಾತ್ರಿ ನಿವಾಸ, ಭವನ ನಿರ್ಮಿಸಿರುವ ಧರ್ಮದರ್ಶಿ ಶೀತಲಗೌಡ ಪಾಟೀಲರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇ ನೆ, ತಾಯಿಯ ಆಶೀರ್ವಾದ ಎಲ್ಲರ ಮೇಲಿರಲಿ ಎಂದು ಹಾರೈಸುತ್ತೇನೆ ಎಂದರು..

ಮಾಜಿ ಶಾಸಕ ಸಂಜಯ ಪಾಟೀಲ ಮಾತನಾಡಿ ಸೌಂದಾಮ ಹುಮಚಾ ಮಠಗಳ ವಾತಾವರಣ ಈಗ ಉಗಾರ ಪದ್ಮವತಿ ಮಂದಿರಲ್ಲಿ ನಿರ್ಮಾಣವಾಗಿದೆ. ಧಾರ್ಮಿಕ ಕಾರ್ಯದಲ್ಲಿ ನಮ್ಮ ಹೆಸರು ಉಳಿಯಬೇಕಾದರೆ ಕೆ,ಎ.ವನಜೋಳ ಅವರ ಹಾಗೆ ಧರ್ಮ ಕಾರ್ಯದಲ್ಲಿ ಕೈ ಜೋಡಿಸಬೇಕಾಗುತ್ತದೆ. ನಾನು ಮತ್ತು ಶಾಸಕ ಅಭಯ ಪಾಟೀಲರು ಕೂಡ ಧರ್ಮದ ಕೆಲಸಲ್ಲಿ ಕೈ ಜೋಡಿಸುವುದಾಗಿ ಭರವಸೆ ನೀಡಿದರು.

ದೇವಸ್ಥಾನದ ಧರ್ಮದರ್ಶಿಗಳಾಆದ ಶೀತಲಗೌಡ ಪಾಟೀಲ ಪ್ರಾಸ್ತಾವಿಕವಾಗಿ ವಿವರವಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕರಾದ ಕಲ್ಲಪ್ಪಣ್ಣ ಮಗೆಣ್ಣವರ, ಮೋಹನರಾವ್ ಶಹಾ, ಸಂಜಯ ಪಾಟೀಲ, ಮಹಾವೀರ ನಿಲಜಗಿ,ಡಾ. ಮಹಾವೀರ ದಾನಿಗೊಂಡ,ಬಾಹುಬಲಿ ನಾಗನೂರಿ, ಸುನೀಲ ಪಾಟೀಲ, ಮಹಾವೀರ ಕಾತ್ರಾಳೆ, ಸಂಜಯ ನಾಡಗೌಡ, ಅಭಯಕುಮಾರ ಅಕಿವಾಟೆ, ಅಶೋಕ ಚೌಗುಲೆ,ಕಲ್ಲಪ್ಪ ವನಜೋಳ, ಎಮ್.ಎಚ್, ನಂದಗಾಂವ,ಸಂಜಯ ಕುಚನೂರೆ, ಮಹೇಂದ್ರ ಖೇಮಲಾಪೂರೆ,ಡಾ,ನೀರಜಾ ನಾಗೇಂದ್ರಕುಮಾರ, ಬಮ್ಮಣ್ಣ ಚೌಗಲೆ, ವರ್ಧಮಾನ ಕೋರಿ, ಪ್ರದೀಪ ಚಿಂಚವಾಡೆ,ಆದಿನಾಥ ಮಸವಾಡೆ ಉಪಸ್ಥಿತರಿದ್ದರು. ಈ ವೇಳೆ ಮಹಾದಾನಿಗಳನ್ನು ಸನ್ಮಾನಿಸಲಾಯಿತು.

ಶೀತಲಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತರನಾಡಿದರು, ವಜ್ರಕುಮಾರ ಮಗದುಮ್ ಸ್ವಾಗತಿಸಿ ವಂದಿಸಿದರು.

# ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಭೇಟಿ



**ಬೆಳಗಾವಿ ವಾರ್ತೆ ಉಗರಗೋಳ:** ಉಗರಗೋಳ ಸಮೀಪದ ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಬುಧವಾರ ಗುಜರಾತ್ ರಾಜ್ಯದ ಅಹ್ಮಮ ದಾಬಾದ್ ನಗರದ. ಮಾನ್ಯ ಪ್ರಧಾನ ಮಂತ್ರಿ ಹಾಗೂ ಕೇಂದ್ರ ಗೃಹ ಸಚಿವರ ಗೃಹ ಕಛೇರಿಯ ಅರ್ಚಕರಾದ ವೈಷ್ಣವ ಆಚಾರ್ಯ ದ್ವಾರಕೇಶ್ ಲಾಲಾಜಿ ಮಹಾರಾಜ್ ಅವರು 52 ಕುಟುಂಬ ಸದಸ್ಯರೊಂದಿಗೆ ಕುಲದೇವತೆಯಾದ ಶ್ರೀರೇಣುಕಾ ಯಲ್ಲಮ್ಮ ದೇವಿಯ ಸನ್ನಿಧಿಗೆ ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು. ಯಲ್ಲಮ್ಮ ದೇವಸ್ಥಾನ ವತಿಯಿಂದ ವೈಷ್ಣವ ಆಚಾರ್ಯ ದ್ವಾರ ಕೇಶ್ ಲಾಲಾಜಿ ಮಹಾರಾಜ್ ಅವರನ್ನು ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಧರ್ಶಿ ಪ್ರಭಾವತಿ ಫಕಿರಪೂರ ಅವರು ಶಾಲೂಹೊದಿಸಿ ಸತ್ಕರಿಸಿದರು. ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಧರ್ಶಿ ಪ್ರಭಾವತಿ ಫಕಿರಪೂರ, ಉಪಕಾರ್ಯಧರ್ಶಿ ನಾಗರತ್ನಾ ಚೋಳಿ ನ, ಬೈಲ್‌ಹೊಂಗಲದ ಮಂಜುನಾಥ ಅಂಗಡಿ, ಶೀತಲ ಕಡಟ್ಟಿ, ಆರ್ ಎಸ್ ಸವದತ್ತಿ, ಎಸ್ ಆರ್ ಈಟಿ, ಡಿ ಆರ್ ಚವ್ಹಾಣ, ಪರಸನಗೌಡ ರೇಣ್ಕೀಗಾಡ, ವಿಶ್ವ ನಾಥಗೌಡ ರೇಣ್ಕಿಗೌ ಡ್ರ, ಪಂಡಿತ ಯಡೂರಯ್ಯ & ದೇವಸ್ಥಾನ ಸಿಬ್ಬಂದಿ ಇದ್ದರು..

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001